ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೬೮

**ಪಟ್ಟಿ – ೧೯**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಗುರುವಾರ, ದಿನಾಂಕ : ೧೭ನೇ ಜುಲೈ, ೨೦೧೪**

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

---

## ಗುಲ್ಬರ್ಗಾ ಮಹಾನಗರದ ಒಳಚರಂಡಿ ಯೋಜನೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೧೬೧ (೭೯೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾ ಮಹಾನಗರದ ಒಳಚರಂಡಿ ಯೋಜನೆ ಅಡಿಯಲ್ಲಿ ೪೦ ಎಂ.ಎಲ್.ಡಿ., ಎಸ್.ಟಿ.ಪಿ. (ರೊಚ್ಚು ನೀರು ಸಂಸ್ಕರಣ ಘಟಕ) ಯೋಜನೆ ಅಸ್ತಿತ್ವದಲ್ಲಿದೆಯೇ ; ಇದ್ದರೆ, ಎಷ್ಟು ವರ್ಷಗಳಿಂದ ಇದೆ ಹಾಗೂ ಎಷ್ಟು ವರ್ಷಗಳಿಂದ ಸ್ಥಗಿತಗೊಂಡಿದೆ (ವಿವರ ನೀಡುವುದು) ;

(ಆ) ಈ ಯೋಜನೆಗೆ ಇಲ್ಲಿಯವರೆಗೆ ಮಂಜೂರಾದ, ಬಿಡುಗಡೆಯಾದ ಅನುದಾನ ಎಷ್ಟು (ವರ್ಷವಾರು ವಿವರ ನೀಡುವುದು) ;

(ಇ) ಈ ಯೋಜನೆಗೆ ನಿಷ್ಕ್ರಿಯಗೊಂಡಿದ್ದು, ಒಳಚರಂಡಿಯ ಕೊಚ್ಚೆ ನೀರು ಸಂಸ್ಕರಣೆಯಾಗದೆ ನೇರವಾಗಿ ಭೀಮಾ ನದಿಗೆ ಸೇರಿ, ಅದೇ ಮೂಲದಿಂದ ಪಂಪ್ ಮಾಡಿ ನಗರಕ್ಕೆ ಕಲುಷಿತ ಕುಡಿಯುವ ನೀರು ಸರಬರಾಜು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಾಗ್ಯೂ ಕೂಡಾ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು (ಸಮಗ್ರ ಮಾಹಿತಿ ನೀಡುವುದು) ;

(ಈ) ಈಗಲಾದರೂ ಸರ್ಕಾರ ಎಚ್ಚೆತ್ತುಕೊಂಡು ಕೊಚ್ಚೆ (ರೊಚ್ಚು) ನೀರನ್ನು ಸಂಸ್ಕರಣೆ ಮಾಡುವಲ್ಲಿ ತುರ್ತು ಕ್ರಮ ಕೈಗೊಳ್ಳವುದೇ ; ಎಷ್ಟು ಕಾಲಮಿತಿಯಲ್ಲಿ ಈ ಯೋಜನೆ ಪೂರ್ಣಗೊಳಿಸುವಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು ?

## ೩೭೧ನೇ ಕಲಂ ಯಶಸ್ವಿ ಅನುಷ್ಠಾನ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೧೬೨ (೧೪೭೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಂವಿಧಾನದ ೩೭೧ನೇ ಕಲಂ ಯಶಸ್ವಿ ಅನುಷ್ಠಾನಕ್ಕೆ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಸಂಪೂರ್ಣ ಮಾಹಿತಿ ಒದಗಿಸುವುದು) ;

(ಆ) ಈ ಕಲಂ ಅನ್ವಯ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಸರ್ಕಾರಿ ನೇಮಕಾತಿಯಲ್ಲಿ ಮೀಸಲಾತಿ ದೊರೆಯುತ್ತಿದೆಯೇ ; ಇದುವರೆಗೂ ಎಷ್ಟು ಜನರಿಗೆ ಉದ್ಯೋಗದಲ್ಲಿ ಮೀಸಲಾತಿ ದೊರೆತಿದೆ (ಜಿಲ್ಲಾವಾರು ಮಾಹಿತಿ ನೀಡುವುದು) ;

(ಇ) ಹೊಸ ನೇಮಕಾತಿಯಲ್ಲಿ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಮೀಸಲಾತಿ ಒದಗಿಸಿರುವ ಕುರಿತು ಖಾತರಿ ಪಡಿಸಿಕೊಳ್ಳಲು ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು) ?

## ಪಶುವೈದ್ಯಕೀಯ ಇಲಾಖೆಯ ಪುನರ್‌ಸಂಘಟನೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೧೬೩ (೧೪೭೩) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಪಶು ವೈದ್ಯಕೀಯ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಎಲ್ಲಾ ಪಶು ವೈದ್ಯಕೀಯ ಕೇಂದ್ರಗಳಲ್ಲಿ ಪಶು ವೈದ್ಯರು ಕೆಲಸ ನಿರ್ವಹಿಸುತ್ತಿದ್ದಾರೆಯೇ (ಜಿಲ್ಲಾವಾರು ವಿವರ ನೀಡುವುದು) ;

(ಆ) ಪಶು ಪಾಲನೆ ಮತ್ತು ಪಶು ವೈದ್ಯಕೀಯ ಇಲಾಖೆಯಲ್ಲಿ ಸರ್ಕಾರದಿಂದ ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಇರುವ ವೈದ್ಯರ ಹುದ್ದೆಗಳು ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ; ಹೈದರಾಬಾದ್ ಕರ್ನಾಟಕ ಭಾಗದ ವಿವರ ಪ್ರತ್ಯೇಕವಾಗಿ ವಿವರಿಸುವುದು ;

(ಇ) ಇಲಾಖೆಯಲ್ಲಿ ಖಾಲಿ ಇರುವ ಪಶು ವೈದ್ಯರ ಮತ್ತು ಇತರೆ ಹುದ್ದೆಗಳ ಭರ್ತಿಗಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು (ವಿವರಿಸುವುದು) ;

(ಈ) ಇಲಾಖೆಯ ಪುನರ್‌ಸಂಘಟನೆ ಯಾವ ಹಂತದಲ್ಲಿದೆ ; ಇದು ಕಾರ್ಯರೂಪಕ್ಕೆ ಬರುವುದು ಯಾವಾಗ (ವಿವರಿಸುವುದು) ?

## ಮುಖ್ಯಮಂತ್ರಿಗಳ ಪರಿಹಾರ ನಿಧಿ

**ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬೪ (೧೪೬೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ರೋಗಿಗಳಿಗೆ ಯಾವ ಯಾವ ಮಾನದಂಡದಡಿ ಪರಿಹಾರ ಬಿಡುಗಡೆ ಮಾಡಲಾಗುತ್ತಿದೆ ;

(ಆ) ಕಳೆದ ಮೂರು ವರ್ಷಗಳಿಂದ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಎಷ್ಟು ರೋಗಿಗಳಿಗೆ ಎಷ್ಟು ಪರಿಹಾರ ನೀಡಲಾಗಿರುತ್ತದೆ (ವರ್ಷವಾರು ಮಾಹಿತಿ ನೀಡುವುದು) ;

(ಇ) ೨೦೧೩ ರಿಂದ ೨೦೧೪ನೇ ಮೇ ತಿಂಗಳವರೆಗೆ ಮುಖ್ಯಮಂತ್ರಿ ಪರಿಹಾರ ನಿಧಿಗಾಗಿ ಅರ್ಜಿ ಸಲ್ಲಿಸಿರುವ ರೋಗಿಗಳ ಸಂಖ್ಯೆ ಎಷ್ಟು ;

(ಈ) ಈ ಸಾಲಿನಲ್ಲಿ ಅರ್ಜಿ ಸಲ್ಲಿಸಿರುವ ರೋಗಿಗಳ ಸಂಖ್ಯೆಯಲ್ಲಿ ಪರಿಹಾರ ಪಡೆದ ಫಲಾನುಭವಿ ರೋಗಿಗಳ ಸಂಖ್ಯೆ ಮತ್ತು ಬಿಡುಗಡೆ ಮಾಡಿದ ಮೊತ್ತವೆಷ್ಟು ;

(ಉ) ಪರಿಹಾರ ನಿಧಿಗಾಗಿ ರೋಗಿಗಳು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕೂಡಲೇ ಪರಿಹಾರ ಬಿಡುಗಡೆ ಮಾಡಲಾಗುವುದೇ ?

## ಕರ್ತವ್ಯ ನಿರತ ಪೊಲೀಸರಿಗೆ ಸೌಕರ್ಯಗಳು

**ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬೫ (೧೪೬೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಸಿಬ್ಬಂದಿ ಬಂದೋಬಸ್ತು ಕರ್ತವ್ಯಕ್ಕೆ ಪೊಲೀಸ್ ಠಾಣೆಯಿಂದ ಬೇರೆ ತಾಲ್ಲೂಕು/ಜಿಲ್ಲೆಗಳಿಗೆ ಹೋದಾಗ ಅವರ ವಾಸ್ತವ್ಯಕ್ಕೆ ಯಾವ ವ್ಯವಸ್ಥೆ ಮಾಡಲಾಗುವುದು ;

(ಆ) ಈ ಕರ್ತವ್ಯದ ಮೇಲೆ ತೆರಳಿದ್ದ ಪೊಲೀಸರು ವಾಸ್ತವ್ಯ/ಊಟದ ವ್ಯವಸ್ಥೆ ಇಲ್ಲದೆ ರಸ್ತೆ ಪಕ್ಕದಲ್ಲಿ, ಠಾಣೆಯ ಮೈದಾನದಲ್ಲಿ, ವಾಹನಗಳಲ್ಲಿ ಮಲಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ತಾಲ್ಲೂಕಿಗೆ ಒಂದರಂತೆ ಪೋಲೀಸ್ ಭವನ, ಪೋಲೀಸ್ ಕ್ಯಾಂಟೀನ್ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಈ) ಇತರೆ ಇಲಾಖೆಗಳ ನೌಕರರಿಗೆ ಯಾವ ರೀತಿ ಸೌಲಭ್ಯಗಳನ್ನು ಕಲ್ಪಿಸಲಾಗುವುದೊ ಅಂತೆಯೇ ಪೋಲೀಸ್ ಇಲಾಖೆಯ ನೌಕರರಿಗೂ ಒದಗಿಸುವ ಕ್ರಮಗಳನ್ನು ಸರ್ಕಾರ ಕೈಗೊಳ್ಳುವುದೇ (ಮಾಹಿತಿ ನೀಡುವುದು) ?

## ಸರ್ಕಾರಿ ಇಲಾಖೆಗಳ ವಿವರ

**ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೧೬೬ (೧೪೫೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇಲಾಖೆ/ಮಂಡಳಿ ನಿಗಮಗಳೆಷ್ಟು (ವಿಳಾಸ ಸಹಿತ ವಿವರ ನೀಡುವುದು) ;

(ಆ) ಈ ಇಲಾಖೆ/ಮಂಡಳಿ/ನಿಗಮಗಳ ಕಛೇರಿ ಹಾಗೂ ಮುಖ್ಯಸ್ಥರ ಕಛೇರಿ ವಿಳಾಸ ಮತ್ತು ದೂರವಾಣಿ ಸಂಖ್ಯೆಯ ಸಂಪೂರ್ಣ ವಿವರ ನೀಡುವುದು ;

(ಇ) ಈ ಎಲ್ಲಾ ಇಲಾಖೆ/ಮಂಡಳಿ/ನಿಗಮಗಳ ಅಧಿಕೃತ ಅಂತರ್ಜಾಲ ತಾಣ (Official website) ಗಳು ಕಾರ್ಯ ಚಾಲನೆಯಲ್ಲಿದೆಯೇ (ಅವುಗಳ ಮಾಹಿತಿ ನೀಡುವುದು) ;

(ಈ) ವಿವಿಧ ಇಲಾಖೆಗಳಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಎಲ್ಲಾ ಸರ್ಕಾರಿ ಆದೇಶದ ಸಾಫ್ಟ್ ಕಾಪಿಯ ಇಲಾಖೆ ಅಂತರ್ಜಾಲ ತಾಣದಲ್ಲಿ ಸಕಾಲದಲ್ಲಿ Upload ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗೆ ಸರಿಪಡಿಸಲು ಸರ್ಕಾರವು ಯಾವ ಕ್ರಮ ಕೈಗೊಳ್ಳಲಿದೆ ?

## ಸರ್ಕಾರ ಪಡೆದ ಸಾಲ

**ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬೭ (೧೪೬೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ವಿವಿಧ ರೂಪದಲ್ಲಿ ಪಡೆದಿರುವ ಒಟ್ಟು ಸಾಲವೆಷ್ಟು ; ಕಳೆದ ೨ ವರ್ಷಗಳ ವಿವರ ನೀಡುವುದು ;

(ಆ) ಹಾಗಿದ್ದಲ್ಲಿ, ಪ್ರತಿ ವರ್ಷ ಪಾವತಿಸಲಾಗುತ್ತಿರುವ ಬಡ್ಡಿ ಹಾಗೂ ಕಂತಿನ ಮೊತ್ತವೆಷ್ಟು (ವಿವರ ನೀಡುವುದು) ;

(ಇ) ಈ ಸಾಲವನ್ನು ಯಾವಾಗ ಮತ್ತು ಯಾವ ಕಾರಣಗಳಿಗೆ ಪಡೆಯಲಾಗಿದೆ (ಮಾಹಿತಿ ನೀಡುವುದು) ?

## ಒಳಚರಂಡಿ ನಿರ್ಮಾಣದ ಕ್ರಿಯಾ ಯೋಜನೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೧೧೬೮ (೧೪೬೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿಂದಗಿ ನಗರದ ಒಳಚರಂಡಿ ನಿರ್ಮಾಣದ ಕ್ರಿಯಾ ಯೋಜನೆಯನ್ನು ಸಿದ್ದುಪಡಿಸಲಾಗಿದೆಯೇ ;

(ಆ) ಅದಕ್ಕೆ ಬೇಕಾಗುವ ಹಣವೆಷ್ಟು ;

(ಇ) ಯಾವಾಗ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ?

## ಮಹಾನಗರ ಪಾಲಿಕೆ ರಚನೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು):-**

೧೧೬೯ (೧೪೬೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಮನಗರ, ಬಿಡದಿ ಹಾಗೂ ಚನ್ನಪಟ್ಟಣಗಳನ್ನು ಸೇರಿಸಿ ರಾಮನಗರದಲ್ಲಿ ಮಹಾನಗರ ಪಾಲಿಕೆಯನ್ನು ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ರಾಮನಗರದಲ್ಲಿ ಮಹಾನಗರ ಪಾಲಿಕೆಯನ್ನು ಯಾವಾಗ ರಚಿಸಲಾಗುವುದು ?

## ಹಾಡ ಹಗಲೇ ಬರ್ಬರ ಕೊಲೆ, ದರೋಡೆ ಹಾಗೂ ಅತ್ಯಾಚಾರ ಪ್ರಕರಣಗಳು

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೧೧೭೦ (೧೪೬೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿ ಹಾಡ ಹಗಲೇ ಬರ್ಬರ ಕೊಲೆ, ದರೋಡೆ ಹಾಗೂ ಅತ್ಯಾಚಾರ ಪ್ರಕರಣಗಳು ನಡೆಯುತ್ತಿದ್ದು, ಸಂಬಂಧಿಸಿದ ಇಲಾಖೆಯವರು ಯಾವುದೇ ಕ್ರಮಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ (ವಿವರ ನೀಡುವುದು) ;

(ಆ) ಈಗಾಗಲೇ ಜಿಲ್ಲೆಯಲ್ಲಿ ಕಳೆದ ೨ ವರ್ಷದಿಂದ ಈ ರೀತಿ ಎಷ್ಟು ಪ್ರಕರಣಗಳು ನಡೆದಿದ್ದು, ಅದರಲ್ಲಿ ಎಷ್ಟು ಪ್ರಕರಣಗಳಲ್ಲಿ ಆರೋಪಿಗಳನ್ನು ಬಂಧಿಸಬೇಕಾಗಿರುತ್ತದೆ (ಪೊಲೀಸ್ ಠಾಣಾವಾರು ವಿವರ ನೀಡುವುದು) ;

(ಇ) ಪ್ರಕರಣಗಳಲ್ಲಿ ಭಾಗಿಯಾದ ಆರೋಪಿಗಳನ್ನು ಬಂಧಿಸಲು ವಿಳಂಬವಾಗಿರುವ ಮತ್ತು ಇದಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ (ವಿವರ ನೀಡುವುದು) ?

## ತ್ಯಾಜ್ಯ ವಿಲೇವಾರಿ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೧೭೧ (೧೪೭೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಘನ ಹಾಗೂ ದ್ರವ ತ್ಯಾಜ್ಯ ವಿಲೇವಾರಿಗಾಗಿ ಮೊದಲನೇ ದರ್ಜೆ, ಎರಡನೇ ದರ್ಜೆ, ಮೂರನೇ ದರ್ಜೆ ನಗರಾಡಳಿತ ಪ್ರದೇಶಗಳಲ್ಲಿ ಸ್ಥಳೀಯ ಆಡಳಿತ ಸಂಸ್ಥೆಗಳು ಅನುಸರಿಸಬೇಕಾದ ಮಾನದಂಡವೇನು ;

(ಆ) ಈ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಅನುಸರಿಸಲಾಗುತ್ತಿದೆಯೇ ;

(ಇ) ಘನ ಹಾಗೂ ದ್ರವ ತ್ಯಾಜ್ಯಗಳು ಪರ್ಯಾಯ ಇಂಧನ ಹಾಗೂ ಸಾವಯವ ಗೊಬ್ಬರವಾಗಿ ಪರಿವರ್ತಿಸಿ ಸ್ಥಳೀಯ ಸಂಸ್ಥೆಗಳಿಗೆ ಆದಾಯ ತರುವಂತಾಗಲು ಆಧುನಿಕ ತಂತ್ರಜ್ಞಾನಗಳನ್ನು ಒಳಪಡಿಸಿ ನಗರ ಪ್ರದೇಶಗಳನ್ನು ಸುಂದರವಾಗಿಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಕಾನೂನು ವಿಶ್ವ ವಿದ್ಯಾಲಯ ವ್ಯಾಪ್ತಿಗೆ ಬಾರದ ಕಾಲೇಜುಗಳು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೧೭೨ (೧೪೭೫) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಕಾನೂನು ಕಾಲೇಜುಗಳೆಷ್ಟು ; ಖಾಸಗಿ ಕಾನೂನು ವಿಶ್ವ ವಿದ್ಯಾಲಯಗಳೆಷ್ಟು ;

(ಆ) ಇವುಗಳ ಪೈಕಿ ಎಷ್ಟು ಕಾನೂನು ಕಾಲೇಜುಗಳು ಮತ್ತು ಖಾಸಗಿ ವಿಶ್ವ ವಿದ್ಯಾಲಯಗಳು ಕಾನೂನು ವಿಶ್ವವಿದ್ಯಾಲಯಕ್ಕೆ ಸೇರ್ಪಡೆಗೊಂಡಿರುತ್ತವೆ ;

(ಇ) ಕಾನೂನು ಪದವಿ ನೀಡುವ ಅರ್ಹತೆಯನ್ನು ಕಾನೂನು ವಿವಿ ಮಾತ್ರ ಹೊಂದಿದ್ದು, ಅನೇಕ ಇತರೆ ಸರ್ಕಾರಿ ವಿಶ್ವವಿದ್ಯಾಲಯಗಳು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ಬ್ಯಾಚುಲರ್ ಮತ್ತು ಸ್ನಾತಕೋತ್ತರ ಕಾನೂನು ಪದವಿಗಳನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ರೀತಿ ಕಾನೂನು ವಿರುದ್ಧವಾಗಿ ಪದವಿ ಪಡೆದ/ಪಡೆಯುವ ವಿದ್ಯಾರ್ಥಿಗಳು ಅನಗತ್ಯ ಸಂಕಷ್ಟಕ್ಕೆ ಸಿಲುಕುವುದನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸ್ಪರ್ಧಾತ್ಮಕ ಪರೀಕ್ಷಾ ಅಭ್ಯರ್ಥಿಗಳಿಗೆ ತರಬೇತಿ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೧೭೩ (೧೪೭೬) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯು.ಪಿ.ಎಸ್.ಸಿ. ಯಂತಹ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲು ರಾಜ್ಯ ಸರ್ಕಾರ ಸ್ಥಾಪಿಸಿರುವ ಸ್ಟಡಿ ಸೆಂಟರ್‌ಗಳೆಷ್ಟು ;

(ಆ) ರಾಜ್ಯದ ಬಡ ಪ್ರತಿಭಾನ್ವಿತ ಮತ್ತು ಗ್ರಾಮೀಣ ವಿದ್ಯಾರ್ಥಿಗಳಿಗೆ ಯು.ಪಿ.ಎಸ್.ಸಿ. ಯಂತಹ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಸರ್ಕಾರದಿಂದ ಸ್ಟಡಿ ಸೆಂಟರ್‌ಗಳನ್ನು ಜಿಲ್ಲಾವಾರು ಪ್ರಾರಂಭಿಸಲು ಯೋಜನೆ ರೂಪಿಸಲಾಗಿದೆಯೇ ;

(ಇ) ಯು.ಪಿ.ಎಸ್.ಸಿ. ಪರೀಕ್ಷೆಯಲ್ಲಿ ರಾಜ್ಯದ ಅಭ್ಯರ್ಥಿಗಳ ಸಾಧನೆಯು ನೆರೆ ರಾಜ್ಯಗಳಾದ ತಮಿಳುನಾಡು, ಕೇರಳ ರಾಜ್ಯಗಳಿಗೆ ಹೋಲಿಸಿದಲ್ಲಿ ಕಡಿಮೆಯಾಗಿದ್ದು, ಆ ರಾಜ್ಯ ಸರ್ಕಾರಗಳ ಮಾದರಿಯಲ್ಲಿ ಜಿಲ್ಲಾವಾರು ಸ್ಟಡಿ ಸೆಂಟರ್‌ಗಳನ್ನು ಪ್ರಾರಂಭಿಸಲು ಕೈಗೊಂಡಿರುವ ಕ್ರಮಗಳೇನು ?

## ಬಾಂಗ್ಲಾ ವಲಸಿಗರು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೧೭೪ (೧೪೭೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಬಾಂಗ್ಲಾ ದೇಶದ ನಾಗರೀಕರು ಅನಧಿಕೃತವಾಗಿ ನೆಲೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬೆಂಗಳೂರಿನ ಯಾವ–ಯಾವ ಭಾಗಗಳಲ್ಲಿ ಬಾಂಗ್ಲಾ ದೇಶದ ನಾಗರೀಕರು ನೆಲೆಸಿರುತ್ತಾರೆ ;

(ಇ) ಈ ನಾಗರೀಕರಿಗೆ ಬಂಗಳೂರಿನಲ್ಲಿ ನೀಡುತ್ತಿರುವ ಸವಲತ್ತುಗಳೇನು ;

(ಈ) ಯಾವ ಸಂವಿಧಾನದ ಅಡಿಯಲ್ಲಿ ಈ ಸವಲತ್ತುಗಳನ್ನು ನೀಡಲಾಗಿದೆ ;

(ಉ) ಈ ಅನಧಿಕೃತ ಬಾಂಗ್ಲಾ ವಲಸಿಗರಿಗೆ ಕುಮ್ಮಕ್ಕು ನೀಡುತ್ತಿರುವ ಜನ, ಸಂಘ ಸಂಸ್ಥೆಗಳ ವಿವರಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ (ವಿವರ ನೀಡುವುದು) ?

## ಮುಜರಾಯಿ ದೇವಸ್ಥಾನಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೧೭೫ (೧೪೭೭) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಜರಾಯಿ ಇಲಾಖೆಯಿಂದ ಕಳೆದ ೫. ವರ್ಷಗಳಲ್ಲಿ ರಾಜ್ಯದ ವಿವಿಧ ದೇವಾಲಯಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡಲಾಗಿರುವ ಹಣ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ಈ ರೀತಿ ಬಿಡುಗಡೆಯಾದ ಹಣದಲ್ಲಿ ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿನ ಯಾವ ಯಾವ ದೇವಸ್ಥಾನಗಳ ಅಭಿವೃದ್ಧಿ, ಜೀರ್ಣೋದ್ಧಾರ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ (ಮಾಹಿತಿ ನೀಡುವುದು) ?

## ಕರ್ನಾಟಕ ದಿನಗೂಲಿ ಕ್ಷೇಮಾಭಿವೃದ್ಧಿ ನಿಯಮ ೨೦೧೩ರ ಜಾರಿ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೧೭೬ (೧೧೧೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೮೪ರ ನಂತರ ನೇಮಕಗೊಂಡು ವಿವಿಧ ಇಲಾಖೆ ಮತ್ತು ನಿಗಮ ಮಂಡಳಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ದಿನಗೂಲಿ ನೌಕರರ ಸಂಖ್ಯೆ ಎಷ್ಟು (ಇಲಾಖಾವಾರು ಮತ್ತು ನಿಗಮ ಮಂಡಳಿವಾರು ವಿವರ ನೀಡುವುದು) ;

(ಆ) ಈ ಪೈಕಿ ದಿನಾಂಕ ೨೦೦೬ರ ಏಪ್ರಿಲ್ ೧೦ಕ್ಕೆ ೧೦ ವರ್ಷ ಪೂರ್ಣಗೊಳಿಸಿ ನಿವೃತ್ತಿ ಮತ್ತು ಮರಣ ಹೊಂದಿದವರ ಸಂಖ್ಯೆ ಎಷ್ಟು ಇಲಾಖಾವಾರು ಮತ್ತು ನಿಗಮ ಮಂಡಳಿವಾರು ವಿವರ ನೀಡುವುದು ;

(ಇ) ದಿನಾಂಕ : ೨೦೧೩ರ ಫೆಬ್ರವರಿ ೧೫ಕ್ಕೆ ಮತ್ತು ನಂತರ ಇದುವರೆವಿಗೂ ೧೦ ವರ್ಷ ಪೂರ್ಣಗೊಳಿಸಿ, ನಿವೃತ್ತಿ ಮತ್ತು ಮರಣ ಹೊಂದಿದವರ ಸಂಖ್ಯೆ ಎಷ್ಟು (ಇಲಾಖಾವಾರು ಮತ್ತು ನಿಗಮ ಮಂಡಳಿವಾರು ವಿವರ ನೀಡುವುದು) ;

(ಈ) ದೀರ್ಘಕಾಲ ದಿನಗೂಲಿ ನೌಕರರಾಗಿ ಸೇವೆ ಸಲ್ಲಿಸಿ, ನಿವೃತ್ತಿ ಮತ್ತು ಮರಣ ಹೊಂದಿದ ನೌಕರರಿಗೆ ಯಾವುದಾದರೂ ಸಾಮಾಜಿಕ ಮತ್ತು ಆರ್ಥಿಕ ಸವಲತ್ತುಗಳನ್ನು ಸರ್ಕಾರದಿಂದ ಒದಗಿಸಲಾಗಿದೆಯೇ ;

(ಉ) ದಿನಾಂಕ : ೨೦೦೬ರ ಏಪ್ರಿಲ್ ೧೦ಕ್ಕೆ ೧೦ ವರ್ಷ ಪೂರ್ಣಗೊಳಿಸಿ ಖಾಯಂಗೊಂಡ ನೌಕರರ ಸಂಖ್ಯೆ ಎಷ್ಟು (ಇಲಾಖಾವಾರು ಮತ್ತು ನಿಗಮ ಮಂಡಳಿವಾರು) ;

(ಊ) ಸರ್ವೋನ್ನತ ನ್ಯಾಯಾಲಯ ಆದೇಶ ನೀಡಿದ ನಂತರ (ದಿನಾಂಕ ೨೦೦೬ರ ಏಪ್ರಿಲ್ ೧೦) ಖಾಯಂಗೊಂಡ ನೌಕರರ ಸಂಖ್ಯೆ ಎಷ್ಟು (ಇಲಾಖಾವಾರು ಮತ್ತು ನಿಗಮ ಮಂಡಳಿವಾರು)

(ಋ) ಪ್ರತಿಯೊಂದು ಇಲಾಖೆಯ ಪ್ರಗತಿ ಪರಿಶೀಲನಾ ಮಾಡುವ ಮುಖ್ಯಮಂತ್ರಿಗಳು ತಮ್ಮ ಅಧೀನಕ್ಕೆ ಒಳಪಟ್ಟು ಇಲಾಖೆಯ ವಿಷಯವಾದ ಕರ್ನಾಟಕ ದಿನಗೂಲಿ ಕ್ಷೇಮಾಭಿವೃದ್ಧಿ ನಿಯಮ-೨೦೧೩-ನ್ನು ಕಳೆದ ೧೬ ತಿಂಗಳಿನಿಂದ ಜಾರಿಗೆ ತರದೇ ತಮ್ಮಲ್ಲೇ ಉಳಿಸಿಕೊಂಡಿರುವುದು ಸಮಂಜಸವೇ ;

(ಋ) ಹಾಗಿದ್ದಲ್ಲಿ, ಕರ್ನಾಟಕ ದಿನಗೂಲಿ ಕ್ಷೇಮಾಭಿವೃದ್ಧಿ ನಿಯಮ–೨೦೧೩ನ್ನು ಶೀಘ್ರವಾಗಿ ಜಾರಿಗೊಳಿಸಲು ಕ್ರಮ ವಹಿಸಲಾಗುವುದೇ ?

### ಮನೆಗಳ ನಿರ್ಮಾಣ ಕಾರ್ಯಕ್ಕೆ ಮರಳು ಸರಬರಾಜು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೧೭೭ (೧೪೮೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಮನೆಗಳನ್ನು ನಿರ್ಮಾಣ ಮಾಡಿಕೊಳ್ಳಲು ನದಿ ಪಕ್ಕದಲ್ಲಿರುವ ಮರಳನ್ನು ಎತ್ತಿನಗಾಡಿಯಲ್ಲಿ ಸರಬರಾಜು ಮಾಡಿಕೊಳ್ಳುವವರಿಗೆ ಕಂದಾಯ ಮತ್ತು ಪೊಲೀಸ್ ಇಲಾಖೆಯ ಸಿಬ್ಬಂದಿಯು ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಅ) ಬಂದಿದ್ದಲ್ಲಿ, ಇದನ್ನು ನೀಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ (ವಿವರಗಳೊಂದಿಗೆ) ?

### ಬೆಂಗಳೂರಿನ ಗಗನಚುಂಬಿ ಅಪಾರ್ಟ್‌ಮೆಂಟ್‌ಗಳು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)–**

೧೧೭೮ (೧೪೮೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಬಹುತೇಕ ಬಡಾವಣೆ/ಸ್ಥಳಗಳಲ್ಲಿ ಎರಡು ಮಹಡಿಯಿಂದ ಹಿಡಿದು ಹತ್ತಕ್ಕೂ ಹೆಚ್ಚಿನ ಮಹಡಿಗಳ

ಗಗನಚುಂಬಿ ಅಪಾರ್ಟ್‌ಮೆಂಟ್‌ಗಳು ನಿರ್ಮಾಣಗೊಂಡಿವೆ, ನಿರ್ಮಾಣಗೊಳ್ಳುತ್ತಿವೆ. ಈ ನಿರ್ಮಾಣಗಳಿಗೆ ಯಾವ್ಯಾವ ಅನುಮತಿ/ಅನುಮೋದನೆ/ನಿಯಮ ಮಾನದಂಡಗಳನ್ನು ಸರ್ಕಾರ ಕಡ್ಡಾಯಗೊಳಿಸಿದೆ ;

(ಆ) ಈ ನಿಯಮಗಳನ್ನು ಉಲ್ಲಂಘಿಸಿ ನಿರ್ಮಾಣ ಗೊಂಡಿರುವ ಎಷ್ಟು ಅಪಾರ್ಟ್‌ಮೆಂಟ್‌ಗಳನ್ನು ಸರ್ಕಾರ ಪತ್ತೆಹಚ್ಚಿದೆ; (ಬಡಾವಣೆವಾರು ವಿವರ ನೀಡುವುದು) ;

(ಇ) ಇಂತಹವುಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಅಪಾರ್ಟ್‌ಮೆಂಟ್ ಹೆಸರಿನೊಂದಿಗೆ ವಿವರ ನೀಡುವುದು)

(ಈ) ಅಪಾರ್ಟ್‌ಮೆಂಟ್ ನಿರ್ಮಾಣ ತರುವಾಯ, ಮಾರಾಟಮುನ್ನಾ 'ಗುಣಮಟ್ಟದ ಪರೀಕ್ಷೆ' ಯನ್ನು ಸರ್ಕಾರ ಮಾಡುತ್ತಿದೆಯೇ; ಇಲ್ಲವಾದಲ್ಲಿ, ಈ ಪರೀಕ್ಷೆಯನ್ನು ಸರ್ಕಾರ ಕಡ್ಡಾಯ ಮಾಡಲು ಚಿಂತಿಸುವುದೇ ;

## ಪಶು ಆಸ್ಪತ್ರೆ ಕಟ್ಟಡ ಹಾಗೂ ಸಿಬ್ಬಂದಿ ವರ್ಗದವರಿಗೆ ವಸತಿ ಸೌಲಭ್ಯ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಬೈಲಹೊಂಗಲ ಕ್ಷೇತ್ರ) :–**

೧೧೭೯ (೧೪೮೮) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆ, ಬಾದಾಮಿ ತಾಲ್ಲೂಕಿನ ಶಿವಯೋಗಿಮಂದಿರದಲ್ಲಿ ಪಶು ಆಸ್ಪತ್ರೆ ಕಟ್ಟಡ, ಪಶು ವೈದ್ಯಾಧಿಕಾರಿಗಳ ಕಟ್ಟಡ, ಹಾಗೂ ಸಿಬ್ಬಂದಿ ಕಟ್ಟಡ ಕಟ್ಟುವ

ಸಲುವಾಗಿ ಸಂಸ್ಥೆಯವರು ಪುಕ್ಕಟೆಯಾಗಿ ಸ್ಥಳವನ್ನು ಕೊಟ್ಟಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಾನ್ಯ ಪಶು ಸಂಗೋಪನೆ ಸಚಿವರು ಸ್ಥಳ ಸಿಕ್ಕ ನಂತರ ಕಟ್ಟಡ ಕಟ್ಟುವುದಾಗಿ ಸದನದಲ್ಲಿ ಆಶ್ವಾಸನೆ ನೀಡಿದ ಸಂಗತಿ ಸರ್ಕಾರದ ಗಮನದಲ್ಲಿದೆಯೇ ;

(ಇ) ಈಗ ಸಂಸ್ಥೆಯವರು ಸ್ಥಳವನ್ನು ಕೊಟ್ಟಿರುವುದರಿಂದ ಆಸ್ಪತ್ರೆ ಕಟ್ಟಡ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ ;

(ಈ) ಗ್ರಾಮಾಂತರ ಪ್ರದೇಶದಲ್ಲಿರುವ ಈ ಆಸ್ಪತ್ರೆಯ ಸಿಬ್ಬಂದಿಗೆ ಇಲ್ಲಿಯೇ ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ನಿವೃತ್ತಿ ಹೊಂದಿದ ವಕೀಲರುಗಳಿಗೆ ಸೌಲಭ್ಯಗಳು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಬೈಲಹೊಂಗಲ ಕ್ಷೇತ್ರ) :–**

೧೧೮೦ (೧೪೮೩) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ, ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡ್ವೋಕೇಟ್‌ಗಳು ವೃತ್ತಿಯಿಂದ ನಿವೃತ್ತಿ ಹೊಂದಿದ ನಂತರ ಅವರಿಗೆ Welfare Fund ಗಾಗಿ ಎಷ್ಟು ಹಣ ನೀಡಲಾಗುತ್ತಿದೆ; ಹಾಗೂ ಯಾವ ನಿಯಮಗಳಿವೆ ;

(ಆ) ಈಗ ಅವರಿಗೆ ಕೊಡಲಾಗುತ್ತಿರುವ Welfare Fund ಕಡಿಮೆಯೆಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸ್ಟಾಂಪ್ ಮುಖಾಂತರ ಹಾಗೂ ಇನ್ನಿತರ ಮೂಲಗಳಿಂದ Welfare Fund ಎಷ್ಟು ಸಂದಾಯವಾಗುತ್ತಿದೆ ;

0332-3

(ಈ) ಯಾವ–ಯಾವ ಭಾಗಗಳಿಂದ ಎಷ್ಟು–ಎಷ್ಟು ಹಣವನ್ನು ಸಂದಾಯ ಮಾಡಲಾಗುತ್ತಿದೆ ;

(ಉ) ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದವರು ಭರಿಸುತ್ತಿರುವ ಹಣದ ಪಾಲೆಷ್ಟು ;

(ಊ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹಣ ಸಂದಾಯವಾಗಿದೆ ; ಹಾಗೂ ಎಷ್ಟು ಅಡ್ವೋಕೇಟ್‌ಗಳಿಗೆ ಇದರ ಪ್ರಯೋಜನವಾಗಿದೆ ;

(ಋ) ನಿವೃತ್ತಿ ನಂತರ ಸೀನಿಯರ್ ಅಡ್ವೋಕೇಟ್‌ಗಳಿಗೆ ಇಪ್ಪತ್ತೈದು ಲಕ್ಷ ರೂ.ಹಾಗೂ ಜ್ಯೂನಿಯರ್ ಅಡ್ವೋಕೇಟ್ ಪ್ರ್ಯಾಕ್ಟೀಸ್ ಬಿಟ್ಟರೆ ಹದಿನೈದು ಲಕ್ಷ ರೂ. ಕೊಡಲು ಕ್ರಮ ಕೈಗೊಳ್ಳಲಾಗುವುದೇ ;

(ೠ) ಹೆಚ್ಚಿನ ಹಣ ಕೊಟ್ಟಲ್ಲಿ ಸರ್ಕಾರದ ಮೇಲೆ ಎಷ್ಟು ಆರ್ಥಿಕ ಹೊರೆ ಬೀಳುವುದು ;

(ಎ) ನಿವೃತ್ತಿ ನಂತರ ವೈದ್ಯಕೀಯ ಸೌಲಭ್ಯ ಒದಗಿಸಲಾಗುವುದೇ ?

### ಕರ್ನಾಟಕ ಲೋಕಸೇವಾ ಆಯೋಗದ ಹಗರಣಗಳು

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೧೮೧ (೧೪೭೫) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಪಿ.ಎಸ್.ಸಿ. ನೇಮಕಾತಿಯಲ್ಲಿ ಹಗರಣ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಹಗರಣದಲ್ಲಿ ಶಾಮೀಲಾಗಿದರುವ ಅಧಿಕಾರಿಗಳು ಎಷ್ಟು ;

(ಇ) ಶಾಮೀಲಾದ ಅಧಿಕಾರಿಗಳ ವಿರುದ್ಧ ಸರ್ಕಾರ ಕ್ರಮ ತೆಗೆದುಕೊಂಡಿದೆಯೇ ; ಕೈಗೊಂಡಿರುವ ಕ್ರಮಗಳ ಮಾಹಿತಿ ನೀಡುವುದು ;

(ಈ) ಈ ಹಗರಣ ಕುರಿತು ಹೈಕೋರ್ಟ್ ನೀಡಿದ ಆದೇಶ ಏನು ?

**ನರ್ಮ್ ಯೋಜನೆಯಡಿ ಒಳಚರಂಡಿ ಕಾಮಗಾರಿ**

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** :-

೧೧೮೨ (೧೫೩೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿತ್ರದುರ್ಗ ಪಟ್ಟಣದಲ್ಲಿ ನರ್ಮ್ ಯೋಜನೆಯಡಿ ನಡೆಯುತ್ತಿರುವ ಒಳಚರಂಡಿ ಕಾಮಗಾರಿಯನ್ನು ಅನುಷ್ಠಾನಗೊಳಿಸುತ್ತಿರುವ ಸಂಸ್ಥೆ ಯಾವುದು; (ವಿವರ ಒದಗಿಸುವುದು) ಸದರಿ ಯೋಜನೆಗೆ ಮಂಜೂರಾಗಿರುವ ಅನುದಾನ ಎಷ್ಟು; ಇದರಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು ; ಬಿಡುಗಡೆ ಆಗಬೇಕಿರುವ ಅನುದಾನ ಎಷ್ಟು; (ವಿವರ ಒದಗಿಸುವದು) ;

(ಆ) ಈ ಒಳಚರಂಡಿ ಕಾಮಗಾರಿಯಲ್ಲಿ ಅಕ್ರಮ ನಡೆದಿರುವ ಕುರಿತು ಸ್ಥಳೀಯವಾಗಿ ಆರೋಪಗಳಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ; ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು) ;

(ಇ) ಸದರಿ ಕಾಮಗಾರಿ ಆರಂಭಗೊಂಡಿದ್ದು ಯಾವಾಗ; ಅದು ವಿಳಂಬ ಆಗಲು ಕಾರಣವೇನು ; ಹಾಗೂ ಈ ಕಾಮಗಾರಿ

ಪೂರ್ಣಗೊಳಿಸಲು ಸರ್ಕಾರ ಕಾಲಮಿತಿ ನಿಗದಿಪಡಿಸಿದೆಯೇ (ವಿವರ ಒದಗಿಸುವುದು) ?

## ಬೆಂಗಳೂರು ಜಲ ಮಂಡಳಿ ಸಂಗ್ರಹಿಸಿರುವ ಶುಲ್ಕ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೧೮೩ (೧೪೮೭) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು-ಐದು ವರ್ಷಗಳಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಬೆಂಗಳೂರು ನಗರದಲ್ಲಿ ನಿರಾಕ್ಷೇಪಣಾ ಪತ್ರ ನೀಡಲು (ಎನ್.ಒ.ಸಿ) ಬಿಲ್ಡರ್‌ಗಳಿಂದ ಸಂಗ್ರಹಿಸಿರುವ ಶುಲ್ಕ ಎಷ್ಟು ; (ವರ್ಷವಾರು ವಿವರ ಒದಗಿಸುವುದು)

(ಆ) ಶುಲ್ಕ ಪಾವತಿಸಿದ ಇನ್ನೂ ಎಷ್ಟು ಅರ್ಜಿದಾರರಿಗೆ ನೀರಿನ ಸಂಪರ್ಕ ಒದಗಿಸಬೇಕಿದೆ ;

(ಇ) ನೀರಿನ ಸಂಪರ್ಕ ನೀಡುವಲ್ಲಿ ಆಗುತ್ತಿರುವ ವಿಳಂಬಕ್ಕೆ ಕಾರಣವೇನು (ಮಾಹಿತಿ ಒದಗಿಸುವುದು) ?

## ಕೈಗಾರಿಕಾ ಉದ್ದೇಶಕ್ಕಾಗಿ ಭೂಸ್ವಾಧೀನ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೧೮೪ (೧೪೮೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಕೈಗಾರಿಕೆ ಉದ್ದೇಶಕ್ಕಾಗಿ ಮಾಡಿರುವ ಭೂಸ್ವಾಧೀನದ ವಿವರ ಒದಗಿಸುವುದು ;

(ಆ) ಇದರಲ್ಲಿ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಹೊಸ ಕೈಗಾರಿಕೆ ತೆರೆಯಲು ಕೆಐಎಡಿಬಿ ಮೂಲಕ ಕಳೆದ ೩ ವರ್ಷಗಳಲ್ಲಿ ಹಂಚಿಕೆಯಾಗಿರುವ ಭೂಮಿ ಪ್ರಮಾಣ ಎಷ್ಟು ; (ವರ್ಷವಾರು ವಿವರ ಒದಗಿಸುವುದು)

(ಇ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಕೈಗಾರಿಕೆ ನಿವೇಶನಕ್ಕಾಗಿ ಕಳೆದ ೩ ವರ್ಷಗಳಿಂದ ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು (ವಿವರ ಒದಗಿಸುವುದು) ?

## ಉದ್ದೇಶಿತ ಚೆನ್ನೈ-ಬೆಂಗಳೂರು-ಚಿತ್ರದುರ್ಗ ಇಂಡಸ್ಟ್ರಿಯಲ್ ಕಾರಿಡಾರ್

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೧೮೫ (೧೫೩೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಉದ್ದೇಶಿತ ಚೆನ್ನೈ-ಬೆಂಗಳೂರು-ಚಿತ್ರದುರ್ಗ ಇಂಡಸ್ಟ್ರಿಯಲ್ ಕಾರಿಡಾರ್ ಯೋಜನೆ (ಸಿಬಿಸಿಐಸಿ) ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಆ) ಸದರಿ ಯೋಜನೆಯಡಿ ರಾಜ್ಯದ ಯಾವ ಜಿಲ್ಲೆಗಳಲ್ಲಿ ಎಷ್ಟು ಕೈಗಾರಿಕಾ ವಲಯಗಳು ಬರಲಿವೆ ; (ವಿವರ ಒದಗಿಸುವುದು)

(ಇ) ಈ ಯೋಜನೆಯಡಿ ತುಮಕೂರು ಹಾಗೂ ಚಿತ್ರದುರ್ಗ ಜಿಲ್ಲೆಗಳಲ್ಲಿ ಎಷ್ಟು ಎಕರೆ ಪ್ರದೇಶಗಳಲ್ಲಿ ಕೈಗಾರಿಕಾ ವಲಯಗಳನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆ ; ಇದಕ್ಕಾಗಿ ಕೆಐಎಡಿಬಿ ವತಿಯಿಂದ ಭೂ ಸ್ವಾಧೀನ ಕಾರ್ಯ ಚಾಲ್ತಿಯಲ್ಲಿದೆಯೇ (ವಿವರಗಳೊಂದಿಗೆ) ?

03392-4

## ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಆಸ್ತಿ ಒತ್ತುವರಿ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೧೮೬ (೧೪೯೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಪ್ರಾಧಿಕಾರದ ಆಸ್ತಿಯನ್ನು ಒತ್ತುವರಿ ಮಾಡಿರುವ, ನಕಲಿ ದಾಖಲೆಗಳನ್ನು ಸೃಷ್ಟಿಸಿಕೊಂಡು ಪರಭಾರೆ ಮಾಡಿರುವ ಎಷ್ಟು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ; (ಪ್ರತಿಯೊಂದರ ವಿವರ ನೀಡುವುದು)

(ಆ) ಇದರಲ್ಲಿ ಪ್ರಾಧಿಕಾರ ಅಧಿಕಾರಿಗಳು ಷಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಂತಹ ಅಧಿಕಾರಿಗಳ ವಿವರ ನೀಡುವುದು ಮತ್ತು ಅವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಮಹಾನಗರ ಪಾಲಿಕೆಗಳಲ್ಲಿ ಪದೋನ್ನತಿ ನಿಯಮಾವಳಿ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೧೮೭ (೧೪೮೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಮಹಾನಗರ ಪಾಲಿಕೆಗಳಲ್ಲಿ ಸಹಾಯಕ ಅಭಿಯಂತರರ ಹುದ್ದೆಯಿಂದ ಸಹಾಯಕ ಕಾರ್ಯಪಾಲಕ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು, ಅಧೀಕ್ಷಕ ಅಭಿಯಂತರರ ಹುದ್ದೆಗಳಿಗೆ ಮುಂಬಡ್ತಿ ನೀಡುವಾಗ ಯಾವ ಮಾನದಂಡ ಪಾಲಿಸಲಾಗುತ್ತದೆ; (ವಿವರ ನೀಡುವುದು) ;

(ಆ) ಮೈಸೂರು ಮಹಾನಗರ ಪಾಲಿಕೆಯಲ್ಲಿ ಇಂಜಿನಿಯರಿಂಗ್ ಪದವೀಧರರನ್ನು ಪರಿಗಣಿಸದೆ ಐ.ಟಿ.ಐ ಮತ್ತು ಡಿಪ್ಲೋಮಾ ಹೋಲ್ಡರ್‌ಗಳಿಗೆ ಮುಂಬಡ್ತಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದಾಗಿ ಬಿ.ಇ., ಪದವೀದರರು ಮುಂಬಡ್ತಿಯಲ್ಲಿ ಅವಕಾಶ ವಂಚಿತರಾಗುವುದಿಲ್ಲವೇ;

(ಇ) ರಾಜ್ಯದ ಮಹಾನಗರ ಪಾಲಿಕೆಗಳಲ್ಲಿ ಇದುವರೆವಿಗೂ ಈ ರೀತಿ ಐ.ಟಿ.ಐ ಮತ್ತು ಡಿಪ್ಲೋಮಾ ಹೋಲ್ಡರ್‌ಗಳಿಗೆ ಉನ್ನತ ಹುದ್ದೆ (ಸಹಾಯಕ ಅಭಿಯಂತರರಿಂದ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಮತ್ತು ಕಾರ್ಯಪಾಲಕ ಅಭಿಯಂತರರ ಹುದ್ದೆ ಗಳನ್ನು ಎಷ್ಟು ಮಂದಿಗೆ ಮುಂಬಡ್ತಿ ನೀಡಲಾಗಿದೆ ; (ಹೆಸರು ಮತ್ತು ಪದನಾಮದೊಂದಿಗೆ ವಿವರ ನೀಡುವುದು)

(ಈ) ಲೋಕೋಪಯೋಗಿ ಇಲಾಖೆ ಮತ್ತು ಇತರೆ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿರುವಂತೆ ಮಹಾನಗರ ಪಾಲಿಕೆಯಲ್ಲಿ ಮುಂಬಡ್ತಿ ನೀಡುವಾಗ ಈ ಪದ್ಧತಿಯನ್ನು ಅಳವಡಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳವುದೇ ?

## ಗೋ ಹತ್ಯಾ ನಿಷೇಧದ ಕಾನೂನಿನ ಅಡಿಯಲ್ಲಿ ದಾಖಲಾದ ಪ್ರಕರಣಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೧೮೮ (೧೪೯೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯಾದಂತ ಕಳೆದ ೨ ವರ್ಷಗಳಲ್ಲಿ ಗೋಹತ್ಯಾ ನಿಷೇಧದ ಕಾನೂನಿನ ಅಡಿಯಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು; ಈ ಪ್ರಕರಣಗಳಲ್ಲಿ ಸಂರಕ್ಷಿಸಲ್ಪಟ್ಟ ಗೋವುಗಳ ಸಂಖ್ಯೆ ಎಷ್ಟು ;

(ಆ) ಅಕ್ರಮ ಗೋವುಗಳ ಸಾಗಾಟದಲ್ಲಿ ತೊಡಗಿದ್ದ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆಯೇ; ಅಂತಹ ಪ್ರಕರಣಗಳ ವಿವರ, ವಾಹನ ಸಂಖ್ಯೆ ಮೊದಲಾದ ವಿವರ ನೀಡುವುದು ;

(ಇ) ಈ ೨ ವರ್ಷಗಳ ಅವಧಿಯಲ್ಲಿ ಇಂತಹ ಅಪರಾಧದಲ್ಲಿ ತೊಡಗಿದ ಎಷ್ಟು ಪ್ರಕರಣಗಳಲ್ಲಿ ನ್ಯಾಯಾಲಯಗಳಿಂದ ಶಿಕ್ಷೆ ಮತ್ತು ಜುಲ್ಮಾನೆ ವಿಧಿಸಲಾಗಿದೆ (ವಿವರ ನೀಡುವುದು) ?

## ಅಂದಿನ ಅಪರ ಮುಖ್ಯಕಾರ್ಯದರ್ಶಿಗಳ ವರದಿ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೧೮೯ (೧೪೯೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗಣಿ ಅವ್ಯವಹಾರಕ್ಕೆ ಸಂಬಂಧಿಸಿದಂತೆ, ಲೋಕಾಯುಕ್ತರು ನೀಡಿದ ವರದಿಯ ಹಿನ್ನೆಲೆಯಲ್ಲಿ ವಿವಿಧ ಸರ್ಕಾರಿ ಅಧಿಕಾರಿಗಳ ಮೇಲಿನ ಆರೋಪದ ಬಗ್ಗೆ ತನಿಖೆ ನಡೆಸಿದ ಹಿಂದಿನ ಅಪರ ಮುಖ್ಯಕಾರ್ಯದರ್ಶಿಗಳಾದ ಶ್ರೀ ಜೈರಾಜ್ ರವರು ನೀಡಿದ ವರದಿಯ ಪ್ರಮುಖ ಅಂಶಗಳೇನು ;

(ಆ) ಇವರ ವರದಿಯಲ್ಲಿ ಆರೋಪ ಮುಕ್ತರಾದ ಅಧಿಕಾರಿಗಳ ಹೆಸರು, ಪದನಾಮ ವಿವರ ನೀಡುವುದು; ಆರೋಪ ಖಚಿತ ಪಡಿಸಲಾದ ಅಧಿಕಾರಿಗಳ ಹೆಸರು, ಪದನಾಮ ವಿವರ ನೀಡುವುದು ;

(ಇ) ಈ ವರದಿಯನ್ನು ಸರ್ಕಾರ ಒಪ್ಪಿದೆಯೇ; ಹಾಗಿದ್ದಲ್ಲಿ, ಆರೋಪ ಸ್ಥಿರವಾದ ಅಧಿಕಾರಿಗಳ ಮೇಲೆ ಮೊಕದ್ದಮೆ ಹೂಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಅನುಮತಿರಹಿತ ಪೇಯಿಂಗ್ ಗೆಸ್ಟ್ ಕಟ್ಟಡಗಳು ಮತ್ತು ಆಗುತ್ತಿರುವ ಅನಾಹುತಗಳು

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೧೯೦ (೧೪೯೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದಲ್ಲಿ ಪಾಲಿಕೆಯಿಂದ ಪರವಾನಗಿ ಪಡೆದು ನಡೆಸಲಾಗುತ್ತಿರುವ ಪೇಯಿಂಗ್ ಗೆಸ್ಟ್ ಸಂಖ್ಯೆ ಎಷ್ಟು; (ಬಡಾವಣೆವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಪೇಯಿಂಗ್ ಗೆಸ್ಟ್ ನಡೆಸುವವರಿಗೆ ಪರವಾನಗಿ ನೀಡುವ ನಿಟ್ಟಿನಲ್ಲಿ ಯಾವ ಮಾರ್ಗಸೂಚಿಗಳನ್ನು ಅನುಸರಿಸಲಾಗುತ್ತಿದೆ (ಸಂಪೂರ್ಣ ಮಾಹಿತಿ ಒದಗಿಸುವುದು) ;

(ಇ) ಹಲವಾರು ಸಂದರ್ಭಗಳಲ್ಲಿ ಪರವಾನಗಿ ಪಡೆಯದೇ ನಡೆಸಲಾಗುತ್ತಿರುವ ಪೇಯಿಂಗ್ ಗೆಸ್ಟ್‌ಗಳ ಬಗ್ಗೆ ಸರ್ಕಾರ ಗಂಭೀರವಾಗಿ ಆಲೋಚಿಸಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಅಂತಹುಗಳ ಬಗ್ಗೆ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು ;

(ಈ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಇಂತಹ ಪೇಯಿಂಗ್ ಗೆಸ್ಟ್ ಕಟ್ಟಡಗಳಲ್ಲಿ ಸಂಭವಿಸಿದ ಅಪರಾಧ ಪ್ರಕರಣಗಳು ಎಷ್ಟು (ಪೂರ್ಣ ಮಾಹಿತಿ ಒದಗಿಸುವುದು) ;

(ಉ) ಇಂತಹ ಪೇಯಿಂಗ್ ಗೆಸ್ಟ್‌ಗಳ ಮಾಲೀಕರು ಗ್ರಾಹಕರ ಸುರಕ್ಷತೆಗೆ, ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ವಿಫಲವಾಗುತ್ತಿರುವುದು, ಇದರಿಂದಾಗಿ ಹೊರ ಪ್ರದೇಶಗಳಿಂದ ಇಲ್ಲಿಗೆ ಶಿಕ್ಷಣ, ಉದ್ಯೋಗ

ಸೇರಿದಂತೆ ಇನ್ನಿತರ ಕಾರಣಗಳಿಗಾಗಿ ತಂಗುವವರು ತೊಂದರೆ ಅನುಭವಿಸುತ್ತಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಆಲೋಚಿಸಿದೆಯೇ (ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು) ?

## ಅಕ್ರಮ ವಲಸಿಗರು ಮತ್ತು ಮುಂದಿನ ಪರಿಣಾಮ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೯೧ (೧೪೯೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಅಕ್ರಮ ವಲಸಿಗರು ವಾಸವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅವರುಗಳ ಮೂಲ ದೇಶ, ಕಂಡುಬಂದ ಅಕ್ರಮ ವಲಸಿಗರ ಸಂಖ್ಯೆ, ವಾಸವಾಗಿರುವ ಪ್ರದೇಶ ಕುರಿತ ಮಾಹಿತಿ ಸರ್ಕಾರಕ್ಕೆ ಇದೆಯೇ ; (ಮಾಹಿತಿ ಒದಗಿಸುವುದು)

(ಆ) ಅಕ್ರಮ ವಲಸಿಗರು ಸಮಾಜ ದುಷ್ಕೃತ್ಯಗಳಲ್ಲಿ ಭಾಗಿಯಾದ ಪ್ರಕರಣಗಳು ಹೆಚ್ಚುತ್ತಿರುವ ಅಂಶವನ್ನು ಸರ್ಕಾರವು ಗಮನಿಸಿದೆಯೇ; ಹಾಗಿದ್ದಲ್ಲಿ ಕಳೆದ ೩ ವರ್ಷಗಳ ಅವಧಿಯಲ್ಲಿ ದಾಖಲಾದ ಪ್ರಕರಣಗಳು ಎಷ್ಟು (ಪ್ರತ್ಯೇಕ ಮಾಹಿತಿ ಒದಗಿಸುವುದು) ;

(ಇ) ಅಕ್ರಮ ವಲಸಿಗರ ಸಂಖ್ಯೆಯು ದಿನೇ ದಿನೇ ಹೆಚ್ಚುತ್ತಿರುವ ಅಂಶವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ ಮುಂದಿನ ಪರಿಣಾಮಗಳ ದೃಷ್ಟಿಯಿಂದ ಕೈಗೊಂಡ ಮುಂಜಾಗ್ರುತಾ ಕ್ರಮಗಳು ಏನು (ಮಾಹಿತಿ ಒದಗಿಸುವುದು) ?

## ಚಾಮುಂಡಿ ಬೆಟ್ಟದ ಮಾರ್ಗದಲ್ಲಿ ಅನೈತಿಕ ಚಟುವಟಿಕೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೯೮೨ (೧೫೦೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಚಾಮುಂಡಿ ಬೆಟ್ಟದ ಮೇಲೆ ಬೆಟ್ಟಕ್ಕೆ ಹೋಗುವ ಬಸ್ ಮಾರ್ಗಗಳಲ್ಲಿ ಅಲ್ಲಲ್ಲೇ ಬಹುಸಂಖ್ಯೆಯಲ್ಲಿ ಯುವಕ ಯುವತಿಯರು, ಸ್ತ್ರೀ ಪುರುಷರು ವಾಹನಗಳನ್ನು ನಿಲ್ಲಿಸಿಕೊಂಡು ಅನೈತಿಕ ಮತ್ತು ಅಶ್ಲೀಲ ಚಟುವಟಿಕೆಗಳಲ್ಲಿ ತೊಡಗಿರುವುದು ಹೆಚ್ಚಾಗಿದ್ದು, ಇದರಿಂದ ಭಕ್ತಾದಿಗಳಿಗೆ, ಸಾರ್ವಜನಿಕರಿಗೆ ಇರಿಸುಮುರಿಸು ಉಂಟಾಗುತ್ತಿದ್ದು, ಇಂತಹ ಅನೈತಿಕ ಮತ್ತು ಅಶ್ಲೀಲ ಚಟುವಟಿಕೆಗಳನ್ನು ತಡೆಯಲು ಮುಖ್ಯವಾಗಿ ಸಂಜೆ ವೇಳೆ ಹಾಗೂ ಆ ನಂತರ ಗಸ್ತುವಾಹನದ ಮೂಲಕ ಬೀಟ್ ವ್ಯವಸ್ಥೆ ಕಲ್ಪಿಸುವ ಮೂಲಕ ಕ್ರಮ ಜರುಗಿಸಲಾಗುವುದೇ ;

(ಆ) ಬೆಟ್ಟದ ಪಾವಿತ್ರ್ಯತೆ ಕಾಪಾಡಲು ಸಾರ್ವಜನಿಕರು, ಭಕ್ತಾದಿಗಳಿಗೆ ಭಂಗತಾರದಿರಲು ಸ್ವತ: ಇಂತಹ ಯುವಕ ಯುವತಿಯರೇ ಸಮಾಜಘಾತುಕ ಶಕ್ತಿಗಳ ಉಪಟಳಕ್ಕೆ ಸೀಗುವುದನ್ನು ತಡೆಯಲು ಇಂತಹ ಅನೈತಿಕ ಚಟುವಟಿಕೆಗಳನ್ನು ಬಂದ್ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಎತ್ತಿನ ಗಾಡಿಗಳ ಮೂಲಕ ಮರಳು ಸಾಗಿಸಲು ಅನುಮತಿ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೧೯೩ (೧೪೯೭) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಜಿಲ್ಲೆ, ತಿ. ನರಸೀಪುರದಲ್ಲಿ ಎತ್ತಿನಗಾಡಿಗಳ ಮೇಲೆ ಮರಳು ಸಾಗಿಸಿ ಜೀವನ ನಡೆಸುತ್ತಿದ್ದ ಕೂಲಿ ಕಾರ್ಮಿಕರಿಗೆ ಮರಳು ಸಾಗಿಸಲು ಅವಕಾಶ ನೀಡದೇ ಎತ್ತಿನ ಗಾಡಿಗಳನ್ನು ವಶಪಡಿಸಿಕೊಂಡು ದಂಡ ವಿಧಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ವಿಧಿಸಿರುವ ದಂಡದ ಪ್ರಮಾಣ ಎಷ್ಟು ;

(ಆ) ಈ ಎತ್ತಿನ ಗಾಡಿಗಳಲ್ಲಿ ಮರಳು ಸಾಗಾಣಿಕೆಗೆ ನಿಗದಿತ ಸುಂಕ/ರಾಜಧನ ವಿಧಿಸಿ ಕೂಲಿಕಾರ್ಮಿಕರು ಎತ್ತಿನ ಗಾಡಿಗಳ ಮೂಲಕ ಮರಳು ಸಾಗಿಸಿ ಮಾರಾಟ ಮಾಡಿ ಜೀವನ ಸಾಗಿಸಲು ಅವಕಾಶ ಮಾಡಿಕೊಡಲಾಗುವುದೇ ;

(ಇ) ಈಚೆಗೆ ಎತ್ತಿನ ಗಾಡಿಗಳವರು ಪ್ರತಿಭಟನೆ ಮಾಡಿರುವುದು ಗಮನಕ್ಕೆ ಬಂದಿದೆಯೇ; ಇವರ ಬೇಡಿಕೆ ಈಡೇರಿಕೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪಾರಂಪರಿಕ ಕಟ್ಟಡಗಳು

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೧೯೪ (೧೪೯೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ನಗರದ ಪಾರಂಪರಿಕ ಕಟ್ಟಡಗಳಾದ ಲ್ಯಾಂಡ್ಸ್‌ಡೌನ್ ಬಿಲ್ಡಿಂಗ್ ಮತ್ತು ರಂಗಾಚಾರ್ಲು ಪುರಭವನಗಳ ನವೀಕರಣ ಮತ್ತು ಜೀರ್ಣೋದ್ಧಾರ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆಯೇ;

ಈ ಕಾಮಗಾರಿಗಳಿಗೆ ಒದಗಿಸಿರುವ ಹಣ ಎಷ್ಟು; ಮಂಜೂರು ಮಾಡಿ ಬಿಡುಗಡೆ ಮಾಡಿರುವ ಹಣ ಎಷ್ಟು; ಕಾಮಗಾರಿಗಳು ಯಾವ ಹಂತದಲ್ಲಿವೆ; ಯಾವಾಗ ಮುಕ್ತಾಯವಾಗುತ್ತವೆ ವಿವರಿಸುವುದು ;

(ಆ) ಮೈಸೂರು ನಗರದಲ್ಲಿ ಗುರುತಿಸಿರುವ ಪಾರಂಪರಿಕ ಕಟ್ಟಡಗಳು ಯಾವುವು; (ಪಟ್ಟಿಯನ್ನು ಒದಗಿಸುವುದು) ಇವುಗಳ ರಿಪೇರಿ, ಜೀರ್ಣೋದ್ಧಾರ ನಿರ್ವಹಣೆಗೆ ಯಾವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ (ವಿವರ ನೀಡುವುದು) ;

(ಇ) ಮೈಸೂರು ನಗರವನ್ನು ಪಾರಂಪರಿಕ ನಗರ ಎಂದು ಘೋಷಿಸಿದ ಮೇಲೆ ಈ ನಗರದ ಪಾರಂಪರಿಕ ಕಟ್ಟಡಗಳ ಅಭಿವೃದ್ಧಿ ನಿರ್ವಹಣೆಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯಾವ ಯಾವ ಯೋಜನೆಗಳಿಂದ ವಿಶೇಷ ಅನುದಾನಗಳನ್ನು ಬಿಡುಗಡೆ ಮಾಡಲಾಗಿದೆ (ವಿವರ ಒದಗಿಸುವುದು) ?

## ಪಾದಚಾರಿಗಳ ಸಬ್‌ವೇ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೧೯೫ (೧೪೯೮) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಾದಚಾರಿಗಳ ಅನುಕೂಲಕ್ಕಾಗಿ ನಿರ್ಮಿಸಿದ ಮೈಸೂರು ನಗರದ ಸಯ್ಯಾಜಿರಾವ್ ರಸ್ತೆ ಮತ್ತು ಅರಮನೆ ಬಳಿಯ ಪಾದಚಾರಿ ಸುರಂಗ ಮಾರ್ಗಗಳು ಅವೈಜ್ಞಾನಿಕವಾಗಿ ನಿರ್ಮಾಣವಾಗಿದ್ದು, ಸಾರ್ವಜನಿಕರ ಬಳಕೆಗೆ ಯೋಗ್ಯವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಪಾದಚಾರಿ ಸುರಂಗ ಮಾರ್ಗಗಳನ್ನು (Subway) ಸರಿಪಡಿಸಿ ಸ್ವಚ್ಛವಾಗಿಟ್ಟು, ನಿಯಮಿತ ಅವಧಿಯಲ್ಲಿ ಬಾಗಿಲು ತೆಗೆದು, ರಕ್ಷಣಾ ಸಿಬ್ಬಂದಿ (Watchman) ನೇಮಿಸಿ ನಿರ್ವಹಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?

**ಪೊಲೀಸ್ ವಸತಿ ಗೃಹಗಳ ಅವ್ಯವಸ್ಥೆ**

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೧೯೬ (೧೪೯೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯ ಹೆಗ್ಗಡದೇವನ ಕೋಟೆಯಲ್ಲಿರುವ ಪೊಲೀಸ್ ವಸತಿ ಗೃಹಗಳ ಸಂಖ್ಯೆ ಎಷ್ಟು; ಈ ವಸತಿ ಗೃಹಗಳ ನಿರ್ವಹಣೆಗೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆ ಮಾಡಿರುವ ಹಣ ಮತ್ತು ಕೈಗೊಂಡಿರುವ ಕಾಮಗಾರಿಗಳು ಯಾವುವು;

(ಆ) ಈ ವಸತಿ ಗೃಹಗಳ ಚರಂಡಿ ವ್ಯವಸ್ಥೆ ಕೆಟ್ಟು ಹೋಗಿ ಶೌಚಾಲಯದ ಗುಂಡಿಗಳು ಭರ್ತಿಯಾಗಿ ಕಲುಷಿತ ನೀರು ಹೊರಕ್ಕೆ ಬಂದು ಇಡೀ ಪ್ರದೇಶವೇ ಗಬ್ಬು ವಾಸನೆ ಮತ್ತು ಸೊಳ್ಳೆ ಕಾಟದಿಂದ ಬಾಧಿತವಾಗಿ ಪೊಲೀಸರು ಮತ್ತು ಅವರ ಕುಟುಂಬ ವರ್ಗದವರು ಖಾಯಿಲೆಗೆ ಈಡಾಗಿ ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಒಳಚರಂಡಿ ವ್ಯವಸ್ಥೆಯನ್ನು ಸರಿಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ; ಈ ವಸತಿ ಗೃಹಗಳಿಗೆ ಕುಡಿಯುವ ನೀರಿನ ಕೊರತೆ ಇದ್ದು, ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ?

## ಬಿ.ಡಿ.ಎ. ಅಭಿವೃದ್ಧಿಪಡಿಸಿರುವ ಫ್ಲಾಟ್ ಹಂಚಿಕೆಯಲ್ಲಿನ ನ್ಯೂನತೆ

**ಶ್ರೀ ಕೆ. ಗೋವಿಂದರಾಜ್** (ವಿಧಾನಸಭೆಯಿಂದ ಚುನಾಯಿತರಾದವರು) :-

೧೧೯೭ (೧೫೦೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ಬೆಂಗಳೂರು ನಗರದಲ್ಲಿ ವಸತಿ ಉದ್ದೇಶದಿಂದ ಬಿ.ಡಿ.ಎ. ನಿರ್ಮಿಸಿದ ಬಹುಮಹಡಿಗಳ ಫ್ಲಾಟ್ ಸಂಖ್ಯೆ ಎಷ್ಟು; ಯಾವ ಪ್ರದೇಶಗಳಲ್ಲಿ ಎಷ್ಟು ಪ್ರಮಾಣದ ಈ ಫ್ಲಾಟ್‌ಗಳ ನಿರ್ಮಾಣವಾಗಿದೆ; (ವರ್ಷವಾರು, ಪ್ರದೇಶವಾರು ಪ್ರತ್ಯೇಕವಾದ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಬಿ.ಡಿ.ಎ. ಈ ಫ್ಲಾಟ್‌ಗಳನ್ನು ಹಂಚುವ ನಿಟ್ಟಿನಲ್ಲಿ ಅನುಸರಿಸಿದ ಮಾರ್ಗಸೂಚಿಗಳು, ವಿಧಿಸಿದ ದರ, ಫ್ಲಾಟ್‌ಗಳನ್ನು ಪಡೆದ ಫಲಾನುಭವಿಗಳು ಇವುಗಳ ಪ್ರತ್ಯೇಕ ಸಂಪೂರ್ಣ ಮಾಹಿತಿ ಒದಗಿಸುವುದು;

(ಇ) ಹಲವಾರು ಪ್ರಕರಣಗಳಲ್ಲಿ ಕಣ್ತಪ್ಪಿನಿಂದ ಮತ್ತು ಉದ್ದೇಶಪೂರ್ವಕವಾಗಿ ಅಕ್ರಮವಾಗಿ ಫ್ಲಾಟ್ ಹಂಚಿಕೆಯಾಗಿರುವುದು ನಿಜವೇ; ಹಾಗಿದ್ದಲ್ಲಿ, ಇಂತಹ ಎಷ್ಟು ಪ್ರಕರಣಗಳು ಗಮನಕ್ಕೆ ಬಂದಿದೆ; ಈ ಅಕ್ರಮಕ್ಕೆ ಕಾರಣವಾದ ಅಂಶಗಳು, ವ್ಯಕ್ತಿ, ಅಧಿಕಾರಿಗಳು ಯಾರು, ಯಾರು; (ಮಾಹಿತಿ ಒದಗಿಸುವುದು)

(ಈ) ಫ್ಲಾಟ್ ಹಂಚಿಕೆಯಲ್ಲಿನ ನ್ಯೂನತೆ ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರದ ಆಲೋಚನೆ ಏನು (ಮಾಹಿತಿ ಒದಗಿಸುವುದು) ?

## ಸರ್ಕಾರಿ ಜಮೀನಿನ ಒತ್ತುವರಿ

**ಶ್ರೀ ಕೆ. ಗೋವಿಂದರಾಜ್** (ವಿಧಾನಸಭೆಯಿಂದ ಚುನಾಯಿತರಾದವರು) :-

೧೧೯೮ (೧೫೦೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶ್ರೀಯುತ ಎ.ಟಿ. ರಾಮಸ್ವಾಮಿರವರ ಅಧ್ಯಕ್ಷತೆಯ ಸದನ ಸಮಿತಿಯು ಬೆಂಗಳೂರು ನಗರದಲ್ಲಿ ಒತ್ತುವರಿಯಾಗಿರುವ ಸರ್ಕಾರಿ ಜಮೀನಿನ ಕುರಿತಾಗಿ ಸಲ್ಲಿಸಿರುವ ವರದಿಯ ಅನುಷ್ಠಾನದ ಬಗ್ಗೆ ಸರ್ಕಾರವು ಗಂಭೀರವಾಗಿ ಆಲೋಚಿಸಿದೆಯೇ; ಹಾಗಿದ್ದಲ್ಲಿ, ಈ ಕುರಿತ ಕ್ರಮದ ಬಗ್ಗೆ ಮಾಹಿತಿ ಒದಗಿಸುವುದು;

(ಆ) ಈ ವರದಿಯನ್ವಯ ಒತ್ತುವರಿಯಾಗಿರುವ ಸರ್ಕಾರಿ ಜಮೀನು ಎಷ್ಟು; ಇದುವರೆವಿಗೆ ಸರ್ಕಾರ ವಶಪಡಿಸಿಕೊಂಡಿರುವ ಜಮೀನು ಎಷ್ಟು; ವಶಪಡಿಸಿಕೊಳ್ಳಲಾದ ಜಮೀನನ್ನು ಬಳಕೆ ಮಾಡುವಲ್ಲಿ ಇದುವರೆವಿಗೆ ಕೈಗೊಂಡ ಕ್ರಮಗಳೇನು; (ಪ್ರತ್ಯೇಕ ಮಾಹಿತಿ ಒದಗಿಸುವುದು)

(ಇ) ಅಕ್ರಮ ಒತ್ತುವರಿಯಾದ ಸರ್ಕಾರಿ ಜಮೀನನ್ನು ವಶಪಡಿಸಿಕೊಂಡ ನಂತರದಲ್ಲಿ ಯಾವ ಇಲಾಖೆಗಳಿಗೆ ಭೂಮಿಯನ್ನು ಮಂಜೂರು ಮಾಡಲಾಗಿದೆ; (ಮಂಜೂರಾತಿ ನೀಡಿದ ಜಮೀನು, ಸ್ಥಳ, ವಿಸ್ತೀರ್ಣ, ನೀಡಿದ ಉದ್ದೇಶದ ಮಾಹಿತಿ ನೀಡುವುದು) ಪ್ರಸ್ತುತ ಆ ಜಾಗದಲ್ಲಿ ಕೈಗೊಂಡ ಕಾಮಗಾರಿಗಳೇನು; (ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಸರ್ಕಾರಿ ಜಮೀನನ್ನು ಅಕ್ರಮವಾಗಿ ಅತಿಕ್ರಮಿಸಿದ್ದ ವ್ಯಕ್ತಿ, ಸಂಘ ಸಂಸ್ಥೆಗಳು ಯಾವುವು; ಇವುಗಳ ವಿರುದ್ಧ ಕೈಗೊಂಡ ಕ್ರಮಗಳೇನು (ಪ್ರತ್ಯೇಕವಾದ ಸಂಪೂರ್ಣ ಮಾಹಿತಿ ಒದಗಿಸುವುದು) ?

## ಮಹಿಳಾ ಪೊಲೀಸ್ ಠಾಣೆಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೧೯೯ (೧೫೦೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಮಹಿಳಾ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಹೊಸದಾಗಿ ಎಷ್ಟು ಮಹಿಳಾ ಠಾಣೆಗಳನ್ನು ಮಂಜೂರು ಮಾಡಲಾಗಿದೆ; ಯಾವ, ಯಾವ ಸ್ಥಳಗಳಿಗೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಮಹಿಳಾ ಠಾಣೆಗಳಲ್ಲಿ ಯಾವ, ಯಾವ ಸ್ವರೂಪದ ಪ್ರಕರಣಗಳ ತನಿಖೆ ನಡೆಸಲಾಗುವುದು; ಇವರಿಗೆ ಪ್ರಥಮ ವರ್ತಮಾನ ವರದಿ ದಾಖಲಿಸಲು ಅಧಿಕಾರವಿದೆಯೇ; ಇದ್ದಲ್ಲಿ ಯಾವ, ಯಾವ ಪ್ರಕರಣಗಳ ಮೇಲೆ, ಇಲ್ಲವಾದಲ್ಲಿ ಕಾರಣವೇನು?

## ಪೊಲೀಸರುಗಳಿಗೆ ನೀಡುವ ಸೌಲಭ್ಯಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೨೦೦ (೧೫೦೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪೊಲೀಸ್ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ನೀಡುತ್ತಿರುವ ಸೌಲಭ್ಯಗಳು ಮತ್ತು ವಿಶೇಷ

ಸೌಲಭ್ಯಗಳು ಯಾವುವು; ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ನೀಡಲ್ಪಡುವ ಪ್ರಶಸ್ತಿಗಳು ಯಾವುವು ;

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಪೊಲೀಸ್ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ನೀಡಲಾದ ಪ್ರಶಸ್ತಿಗಳು ಯಾವುವು; ಅದನ್ನು ಪಡೆದ ಅಧಿಕಾರಿಗಳ ಮತ್ತು ಸಿಬ್ಬಂದಿಗಳು ಯಾರು; (ಜಿಲ್ಲಾವಾರು, ವರ್ಷವಾರು, ಹೆಸರು, ಹುದ್ದೆ, ವಿಳಾಸ ಪಡೆದ ಪ್ರಶಸ್ತಿಯ ವಿವರ ನೀಡುವುದು) ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ವಸತಿ ಸೌಲಭ್ಯದ ಕೊರತೆಯನ್ನು ಹೊಂದಿರುವ ಪೊಲೀಸ್ ಠಾಣೆಗಳು ಯಾವುವು; ಈ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಹೊರಗುತ್ತಿಗೆ ನೌಕರರ ಸಮಸ್ಯೆಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೦೧ (೧೫೦೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರಿ ಕಛೇರಿಗಳಲ್ಲಿ ಖಾಲಿಯಿರುವ ಕೆಳಹಂತದ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದಲ್ಲಿ ಭರ್ತಿಗೊಳಿಸಲಾಗಿದ್ದು, ಈ ನೌಕರರನ್ನು ಹೊರಗುತ್ತಿಗೆ ಸೇವಾ ಸಂಸ್ಥೆಯ ಮುಖಾಂತರ ನೇಮಕಗೊಳಿಸಿದ ರೀತಿಯಲ್ಲಿ ದಾಖಲಿಸಿ ವೇತನವನ್ನು ಸೇವಾ ಸಂಸ್ಥೆಗೆ ನೀಡಲಾಗುತ್ತಿದ್ದು, ಸೇವಾ ಸಂಸ್ಥೆಯವರು ನೌಕರರಿಗೆ ಬಟವಾಡೆ ಮಾಡದೇ ಸತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ನೌಕರರಿಗೆ ನೀಡಬೇಕಾದ ವಿವಿಧ ಭವಿಷ್ಯ ನಿಧಿಗಳನ್ನು ಇಲಾಖೆಗಳಿಂದ ಪಡೆದ ನಂತರವೂ ಸೇವಾ ಸಂಸ್ಥೆಯವರು ನೌಕರರ ಖಾತೆಗಳಿಗೆ ಈ ಮೊತ್ತವನ್ನು ಜಮೆ ಮಾಡದೇ ಲಕ್ಷಾಂತರ ಹಣವನ್ನು ನೌಕರರಿಗೆ ವಂಚಿಸುತ್ತಿರುವ ಸಂಸ್ಥೆಯವರ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು;

(ಇ) ಸಂಸ್ಥೆಯವರ ವಂಚನೆಯಿಂದಾಗಿ ಬಡ ನೌಕರರು ತೊಂದರೆಗೀಡಾಗಿ ವೇತನವಿಲ್ಲದೇ ಜೀವನ ಸಾಗಿಸಬೇಕಾದ ಪರಿಸ್ಥಿತಿ ಉಂಟಾಗಿರುವುದರಿಂದ ಈ ನೌಕರರನ್ನು ಯಾವುದಾದರೂ ಸರ್ಕಾರಿ ಸಂಸ್ಥೆಯ ಮುಖಾಂತರ ನೇಮಕಗೊಳಿಸಿ ಕ್ಲಪ್ತ ಅವಧಿಯೊಳಗೆ ವೇತನ, ಭತ್ಯೆಗಳು ದೊರಕುವಂತೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಇಲ್ಲವಾದಲ್ಲಿ, ಕಾರಣವೇನು?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿಂಗಡಣೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೦೨ (೧೫೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನು ಆಡಳಿತಾತ್ಮಕ ಕಾರಣಕ್ಕಾಗಿ ಎಷ್ಟು ವಲಯಗಳಾಗಿ ವಿಂಗಡಿಸಲಾಗಿದೆ; ಪ್ರತಿ ವಲಯಕ್ಕೆ ಮಂಜೂರಾದ ಹುದ್ದೆಗಳೆಷ್ಟು; ಕೊರತೆಯಿರುವ ಹುದ್ದೆಗಳೆಷ್ಟು; ಈ ಕೊರತೆಯನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಲಯ ಕಛೇರಿಯ ಕೆಲಸದ ಅವಧಿಯಲ್ಲಿ ನೌಕರರ ಕರ್ತವ್ಯ ನಿರ್ವಹಣೆ ಪರಿಶೀಲಿಸಲು ಬಯೋಮೆಟ್ರಿಕ್ ಇ-ಹಾಜರಾತಿ ಮತ್ತು ಸಿ.ಸಿ. ಕ್ಯಾಮರ ವ್ಯವಸ್ಥೆಯನ್ನು ಕಲ್ಪಿಸಲಾಗಿದೆಯೇ; ಇಲ್ಲವಾದಲ್ಲಿ, ಯಾವಾಗ ಕಲ್ಪಿಸಲಾಗುವುದು ;

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ವಲಯ ಕಛೇರಿಗಳಲ್ಲಿಯೂ ಕಡತಗಳು ನಿಗದಿ ಮಾಡಿದ ಅವಧಿಯೊಳಗೆ ವಿಲೇವಾರಿ ಆಗುತ್ತಿರುವುದನ್ನು ಖಾತರಿಪಡಿಸಲು ಪಾಲಿಕೆಯು ಗಣಕೀಕೃತ ವ್ಯವಸ್ಥೆ ಹೊಂದಲಿದೆಯೇ; ಇಲ್ಲವಾದಲ್ಲಿ ಕಾರಣವೇನು ?

## ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೦೩ (೧೫೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯುವರು ಎಷ್ಟು ಎಕರೆ ಪಟ್ಟಾ ಜಮೀನು ಸ್ವಾಧೀನಪಡಿಸಿಕೊಂಡಿರುತ್ತಾರೆ; ಸ್ವಾಧೀನಪಡಿಸಿಕೊಂಡ ದಿನಾಂಕ ಯಾವುದು (ಸರ್ವೆ ನಂಬರ್‌ವಾರು ವಿವರಗಳನ್ನು ನೀಡುವುದು);

(ಆ) ಸದರಿ ಪಟ್ಟಾ ಜಮೀನು ಮಾಲೀಕರಿಗೆ ಪರಿಹಾರಧನವನ್ನು ನೀಡಲಾಗಿದೆಯೇ; ನೀಡಲಾಗಿದ್ದಲ್ಲಿ, ವಿವರಗಳನ್ನು ನೀಡುವುದು;

(ಇ) ಪರಿಹಾರಧನ ವಿತರಿಸದೇ ಇರುವ ಪ್ರಕರಣಗಳು ಬೆಳಕಿಗೆ ಬಂದಿವೆಯೇ; ಬಂದಿದ್ದಲ್ಲಿ, ಅವುಗಳ ವಿವರಗಳನ್ನು ನೀಡುವುದು;

(ಈ) ಪರಿಹಾರಧನ ವಿತರಣೆಯಾಗದೇ ಇರುವ ಕುರಿತು ಸರ್ಕಾರಕ್ಕೆ ದೂರುಗಳೇನಾದರೂ ಸ್ವೀಕೃತವಾಗಿವೆಯೇ; ಸ್ವೀಕೃತವಾಗಿದ್ದಲ್ಲಿ, ದೂರುಗಳ ಇತ್ಯರ್ಥಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?

## ಕೊಲೆ, ಸುಲಿಗೆ, ದರೋಡೆ ಪ್ರಕರಣಗಳು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೦೪ (೧೫೧೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩ರಿಂದ ೨೦೧೪ರವರೆಗೆ ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಕೊಲೆ, ಸುಲಿಗೆ, ದರೋಡೆ ಪ್ರಕರಣಗಳು ದಾಖಲಾಗಿವೆ;

(ಆ) ಈ ಪ್ರಕರಣಗಳಿಗೆ ಸಂಬಂಧಿಸಿದಂತೆ ಬಂಧಿಸಲಾದ ವ್ಯಕ್ತಿಗಳು ಹಾಗೂ ಶಿಕ್ಷೆಗೆ ಗುರಿಯಾದ ಅಪರಾಧಿಗಳು ಎಷ್ಟು (ಪ್ರತ್ಯೇಕ ವಿವರಗಳೊಂದಿಗೆ)?

## ಪಶು ಆಸ್ಪತ್ರೆಗಳು : ವೈದ್ಯರು, ಸಿಬ್ಬಂದಿ ಕೊರತೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೦೫ (೧೫೧೪) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪಶು ಆಸ್ಪತ್ರೆಗಳೆಷ್ಟು;

(ಆ) ಈ ಭಾಗದಲ್ಲಿ ಪಶು ವೈದ್ಯರು ಹಾಗೂ ಸಿಬ್ಬಂದಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೦೬ (೧೫೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಒಟ್ಟು ಕೈಗಾರಿಕೆಗಳು ಎಷ್ಟು;

(ಆ) ಜಿಲ್ಲೆಗಳಲ್ಲಿ ಸದ್ಯ ಕಾರ್ಯ ಸ್ಥಿತಿಯಲ್ಲಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಕಾರ್ಖಾನೆಗಳಿಗೆ ಸರ್ಕಾರದಿಂದ ಪಡೆದಿರುವ ಭೂಮಿಯ ವಿಸ್ತೀರ್ಣ ಎಷ್ಟು?

## ಗಾಂಧಿನಗರದ ಕನಕದುರ್ಗಮ್ಮ ದೇವಸ್ಥಾನ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೦೭ (೧೫೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಬಳ್ಳಾರಿ ನಗರದಲ್ಲಿರುವ ಗಾಂಧಿನಗರದ ಶ್ರೀ ಕನಕ ದುರ್ಗಮ್ಮ ದೇವಸ್ಥಾನದ ಗೋಪುರ ಇತರೆ ಕಾಮಗಾರಿಗಳು ಅಪೂರ್ಣಗೊಂಡಿದ್ದು, ಭಕ್ತಾದಿಗಳಿಗೆ ತುಂಬಾ ತೊಂದರೆ ಆಗಿದ್ದು ಈ ದೇವಸ್ಥಾನದ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು?

## ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಸೊಳ್ಳೆ ನಿಯಂತ್ರಣ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೨೦೮ (೧೫೨೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿ.ಬಿ.ಎಂ.ಪಿ) ಪ್ರದೇಶದಲ್ಲಿ ಸೊಳ್ಳೆಕಾಟ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ನಿಜವಾದರೆ, ಸೊಳ್ಳೆ ನಿಯಂತ್ರಣಕ್ಕೆ ತೆಗೆದುಕೊಂಡಿರುವ ಕ್ರಮಗಳೇನು; ಆ ಉದ್ದೇಶಕ್ಕೆ ಪ್ರತಿವರ್ಷ ಎಷ್ಟು ವೆಚ್ಚವಾಗುತ್ತಿದೆ;

(ಇ) ಆ ಉದ್ದೇಶ ಸಫಲತೆಗೆ ದೊಡ್ಡ ಮೋರಿಗಳನ್ನು ಸ್ವಚ್ಛ ಮಾಡಲಾಗುವುದೇ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಪ್ರತಿವರ್ಷ ಸಣ್ಣ, ಮಧ್ಯಮ ಮತ್ತು ದೊಡ್ಡ ಮೋರಿಗಳನ್ನು ಸ್ವಚ್ಛಗೊಳಿಸುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೨೦೯ (೧೫೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಪ್ರತಿ ವರ್ಷ ಸಣ್ಣ, ಮಧ್ಯಮ ದೊಡ್ಡ ಮೋರಿಗಳನ್ನು ಸ್ವಚ್ಛಗೊಳಿಸಲಾಗುತ್ತಿದೆಯೇ;

(ಆ) ಸ್ವಚ್ಛಗೊಳಿಸಲಾಗುತ್ತಿದ್ದಲ್ಲಿ, ಈ ಕಾಮಗಾರಿಗೆ ಪ್ರತಿ ವರ್ಷ ಬಿ.ಬಿ.ಎಂ.ಪಿ. ವೆಚ್ಚ ಮಾಡುತ್ತಿರುವ ಹಣದ ಮೊತ್ತವೆಷ್ಟು; ಮೂರು ವರ್ಷಗಳ ಮಾಹಿತಿ ನೀಡುವುದು;

(ಇ) ಈ ಉದ್ದೇಶಕ್ಕಾಗಿ ಕೇಂದ್ರ ಮತ್ತು ರಾಜ್ಯದಿಂದ ಬಂದ ಹಣವೆಷ್ಟು ಮತ್ತು ಬಿ.ಬಿ.ಎಂ.ಪಿ. ಖರ್ಚು ಮಾಡಿದ ಹಣವೆಷ್ಟು?

## ಭೂಸ್ವಾಧೀನತೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೨೧೦ (೧೫೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರ್ಕಾವತಿ, ಕೆಂಪೇಗೌಡ, ಶಿವರಾಮ ಕಾರಂತ್ ಬಡಾವಣೆ ನಿರ್ಮಾಣ ಮಾಡಲು ಭೂಸ್ವಾಧೀನಕ್ಕೆ ಪ್ರಕಟಿಸಿದ ಒಟ್ಟು ವಿಸ್ತೀರ್ಣ ಎಷ್ಟು; (ಬಡಾವಣೆ ಸಹಿತ ವಿವರ ನೀಡುವುದು)

(ಆ) ಆ ಬಡಾವಣೆಗಳಿಗೆ ನಿಯೋಜಿಸಿದ ಭೂಸ್ವಾಧೀನವನ್ನು ಕೈಬಿಟ್ಟಿರುವ ಭೂಸ್ವಾಧೀನ ಹಿಂಪಡೆದಿರುವ ವಿಸ್ತೀರ್ಣ ಎಷ್ಟು (ವಿವರ ನೀಡುವುದು) ?

## ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕಾನೂನು ಸುವ್ಯವಸ್ಥೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೨೧೧ (೧೫೧೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಜನವರಿ ೨೦೧೪ ರಿಂದ ಇತ್ತೀಚೆಗೆ ಒಂಟಿ ಮಹಿಳೆಯರು ಹಾಗೂ ಒಂಟಿ ವೃದ್ಧರು ಇರುವ ಮನೆಗಳಲ್ಲಿ ಸಂಭವಿಸಿರುವ ಅತ್ಯಾಚಾರ, ಕೊಲೆ, ದರೋಡೆ ಪ್ರಕರಣಗಳು ಎಷ್ಟು;

(ಆ) ಇಂತಹ ಎಷ್ಟು ಪ್ರಕರಣಗಳಲ್ಲಿ ತಪ್ಪಿತಸ್ಥರು ಸಿಕ್ಕಿರುತ್ತಾರೆ;

(ಇ) ಉಳಿದ ಪ್ರಕರಣಗಳು ಇತ್ಯರ್ಥವಾಗದಿರಲು ಪ್ರಮುಖ ಕಾರಣಗಳೇನು;

(ಈ) ಮುಂದೆ ಈ ರೀತಿಯ ಪ್ರಕರಣಗಳನ್ನು ಹತ್ತಿಕ್ಕಲು ಯಾವ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುವುದು ?

## ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಆಟದ ಮೈದಾನಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೨೧೨ (೧೫೧೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಇರುವ ಆಟದ ಮೈದಾನಗಳು ಎಷ್ಟು;

(ಆ) ಯಾವ ಯಾವ ವಾರ್ಡ್‌ಗಳಲ್ಲಿ ಆಟದ ಮೈದಾನದ ಕೊರತೆ ಇದೆ; ಈ ಕೊರತೆ ನೀಗಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲು ಯೋಚಿಸಲಾಗಿದೆ ;

(ಇ) ಆಟದ ಮೈದಾನಕ್ಕೆಂದು ಮೀಸಲಿಟ್ಟಿದ್ದ ಯಾವ ಜಾಗಗಳನ್ನು ಪಾರ್ಕ್ ಮತ್ತಿತರ ಉಪಯೋಗಕ್ಕೆಂದು ಬದಲಾಯಿಸಿ ಬಳಸಲಾಗುತ್ತಿದೆ ? (ವಿವರ ನೀಡುವುದು)

## ಪೊಲೀಸ್ ಸಿಬ್ಬಂದಿ ವಸತಿ ಗೃಹಗಳ ಕೊರತೆ

**ಶ್ರೀ ಮೃತ್ಯುಂಜಯ ಜಿನಗಾ(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೧೩ (೧೫೨೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿಗೆ ವಸತಿ ಗೃಹಗಳು ಅವಶ್ಯಕತೆಗೆ ಅನುಗುಣವಾಗಿ ಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕೊರತೆಯಿರುವ ವಸತಿಗೃಹ ನಿರ್ಮಾಣಕ್ಕೆ ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಇ) ಪ್ರಸಕ್ತ ವರ್ಷದಲ್ಲಿ ಏನಾದರೂ ಹೊಸ ವಸತಿಗೃಹ ಮಂಜೂರು ಮಾಡಲಾಗಿದೆಯೇ ?

## ಕಳುವಾದ ಮತ್ತು ಪತ್ತೆ ಮಾಡಲಾದ ವಾಹನಗಳು

**ಶ್ರೀ ಮೃತ್ಯುಂಜಯ ಜಿನಗಾ(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೧೪ (೧೫೨೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ವಾಹನ ಕಳುವಿನ ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಆ) ಎಷ್ಟು ವಾಹನಗಳನ್ನು ಪತ್ತೆ ಮಾಡಲಾಗಿದೆ ;

(ಇ) ಪತ್ತೆ ಮಾಡಲಾದ ಎಲ್ಲಾ ವಾಹನಗಳನ್ನು ವಾರಸುದಾರರಿಗೆ ಹಿಂತಿರುಗಿಸಲಾಗಿದೆಯೇ ;

(ಈ) ವಾಹನ ಪತ್ತೆ ಮಾಡಿದರೂ ವಾರಸುದಾರರಿಗೆ ಹಿಂತಿರುಗಿಸದೇ ಎಷ್ಟು ವಾಹನಗಳು ಇನ್ನೂ ಪೊಲೀಸ್ ಠಾಣೆಗಳಲ್ಲಿ ಅನಾಥವಾಗಿ ಬಿದ್ದಿವೆ ? (ತಾಲ್ಲೂಕುವಾರು ವಿವರ ನೀಡುವುದು)

## ಪಶು ಆಹಾರ ತಯಾರಿಕೆಯಲ್ಲಿ ರಾಸಾಯನಿಕ ಪದಾರ್ಥದ ಬಳಕೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** :-

೧೨೧೫ (೧೫೩೧) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪಶು ಆಹಾರವನ್ನು ತಯಾರಿಸುವ ಘಟಕಗಳು ಎಷ್ಟಿವೆ ; (ಜಿಲ್ಲಾವಾರು, ಘಟಕಗಳ ಪೂರ್ಣ ವಿವರವನ್ನು ನೀಡುವುದು)

(ಆ) ಪಶು ಆಹಾರ ತಯಾರಿಕೆಗೆ ಅನುಸರಿಸುವ ಮಾನದಂಡವೇನು ; (ಪೂರ್ಣ ವಿವರ ನೀಡುವುದು) ಪಶು ಆಹಾರ ತಯಾರಿಕೆಯಲ್ಲಿ ಸರಿಯಾದ ಮಾನದಂಡವನ್ನು ಅನುಸರಿಸದೇ ಪಶು ಆಹಾರದಲ್ಲಿ ಮಿತಿ ಮೀರಿ ರಾಸಾಯನಿಕ ಪದಾರ್ಥಗಳನ್ನು ಬಳಸಿ ಕಳಪೆ ಗುಣಮಟ್ಟದ ಪಶು ಆಹಾರ ಉತ್ಪಾದನೆ ಮಾಡಿ ಸರಬರಾಜು ಮಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಗಮನಕ್ಕೆ ಬಂದಿದ್ದರೆ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಪೂರ್ಣ ವಿವರಗಳನ್ನು ನೀಡುವುದು)

(ಇ) ಈ ರೀತಿ ಅತಿಯಾದ ರಾಸಾಯನಿಕ ಪದಾರ್ಥ ಬಳಸಿದ ಪಶು ಆಹಾರದಿಂದ ರೋಗಿಹೋದ ಎಷ್ಟೋ ರೈತರು ಇಂದು ಸ್ವತ: ತಮ್ಮ ಮನೆಗಳಲ್ಲೇ ರಾಸಾಯನಿಕ ಮುಕ್ತ ಪಶು ಆಹಾರವನ್ನು ತಯಾರಿಸಿ ತಮ್ಮ ಹಸುಗಳಿಗೆ ನೀಡಿ ರೋಗಮುಕ್ತ ಪಶು ಸಂಗೋಪನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಸರ್ಕಾರ ಈ ರೀತಿಯ ಪಶು ಆಹಾರ ತಯಾರಿಕೆಗೆ ಏಕೆ ಉತ್ತೇಜನ ನೀಡುತ್ತಿಲ್ಲ ? (ಪೂರ್ಣ ವಿವರ ನೀಡುವುದು)

## ಮಹಾನಗರ ಪಾಲಿಕೆಗಳಾಗಿ ಮೇಲ್ದರ್ಜೆ: ಬಿಡುಗಡೆಯಾದ ಅನುದಾನ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೨೧೬ (೧೫೩೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಯಾವ ಯಾವ ನಗರ ಸಭೆಗಳನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸ ಲಾಗಿದೆ ; (ಮಹಾನಗರ ಪಾಲಿಕೆಯ ಪೂರ್ಣ ವಿವರ ನೀಡುವುದು)

(ಆ) ಇವುಗಳಿಗೆ ನೀಡುವ ಸವಲತ್ತುಗಳೇನು ; (ಪೂರ್ಣ ವಿವರ ನೀಡುವುದು)

(ಇ) ಸದರಿ ಮಹಾನಗರ ಪಾಲಿಕೆಗಳಿಗೆ ನೀಡುತ್ತಿರುವ ಅನುದಾನದ ಮಾನದಂಡವೇನು ; (ಪೂರ್ಣ ವಿವರ ನೀಡುವುದು)

(ಈ) ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಕಳೆದ ವರ್ಷ ಮಹಾನಗರ ಪಾಲಿಕೆಗಳಿಗೆ ಬಿಡುಗಡೆ ಮಾಡಿದ ಮೊತ್ತವೆಷ್ಟು ; (ಕೇಂದ್ರ ಸರ್ಕಾರ, ರಾಜ್ಯ ಸರ್ಕಾರಗಳ ಅನುದಾನದ ಲೆಕ್ಕ ಶೀರ್ಷಿಕೆ ಕಾಮಗಾರಿ ಮೊತ್ತಗಳ ಪ್ರತ್ಯೇಕ ವಿವರ ನೀಡುವುದು) ?

## ಪಶುಗಳಿಗೆ ನೀಡುವ ಚುಚ್ಚುಮದ್ದು ಕಳಪೆ ಗುಣಮಟ್ಟದ್ದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೧೭ (೧೫೨೯) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

ಅ) ಜಾನುವಾರುಗಳಿಗೆ ಜ್ವರ ಬಂದಾಗ ನೀಡುವ ಚುಚ್ಚುಮದ್ದನ್ನು ಖಾಸಗಿ ಔಷಧಾಲಯಗಳಿಂದ ತಂದು ಹಸುಗಳಿಗೆ ನೀಡಿದರೆ ರೋಗವಾಸಿಯಾಗುತ್ತದೆ ಪಶುಸಂಗೋಪನಾ ಇಲಾಖೆಯ ಮುಖಾಂತರ ಸರಬರಾಜಾಗಿರುವ ಅದೇ ಕಂಪನಿಯ ಚುಚ್ಚುಮದ್ದನ್ನು ನೀಡಿದರೆ ಜಾನುವಾರುಗಳು ಗುಣಮುಖವಾಗುತ್ತಿಲ್ಲ, ಇಲಾಖೆಯವರು ನೀಡುತ್ತಿರುವುದು ಕಳಪೆ ಚುಚ್ಚುಮದ್ದು ಎಂಬ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿರುವ ರೈತರ ಆರೋಪ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ರೀತಿ ಕಳಪೆ ಔಷಧ ಸರಬರಾಜಾಗುತ್ತಿರುವ ಬಗ್ಗೆ ತನಿಖೆಯಾಗಿದೆಯೆ; ತಪ್ಪಿತಸ್ಥರ ಮೇಲೆ ಕ್ರಮ ಕೈಗೊಂಡು ಉತ್ತಮ ಗುಣಮಟ್ಟದ ಚುಚ್ಚುಮದ್ದು ಸರಬರಾಜಿಗೆ ವ್ಯವಸ್ಥೆಯಾಗಿದೆಯೇ ? (ಸಂಪೂರ್ಣ ವಿವರ ನೀಡುವುದು)

## ತ್ಯಾಜ್ಯ ವಿಲೇವಾರಿ ಘಟಕ ಸ್ಥಾಪನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೧೮ (೧೪೬೮) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರತಿ ಮಹಾನಗರಪಾಲಿಕೆಯಲ್ಲಿ ತ್ಯಾಜ್ಯ ವಿಲೇವಾರಿ ಘಟಕ ಮಾಡಬೇಕೆಂಬ ಸರ್ಕಾರದ ಆಶಯಕ್ಕೆ ಪೂರಕವಾಗಿ ಮಹಾನಗರಪಾಲಿಕೆಗಳು ಕೈಗೊಂಡ ಕ್ರಮಗಳೇನು ; (ಪ್ರತಿ ನಗರಪಾಲಿಕೆ ಬಗ್ಗೆ ಪ್ರತ್ಯೇಕ ಮಾಹಿತಿ ನೀಡುವುದು)

(ಆ) ತ್ಯಾಜ್ಯ ವಿಲೇವಾರಿಯಲ್ಲಿ ವೃತ್ತಿನಿರತ ಸಿಬ್ಬಂದಿಗಳಿಗೆ ಕನಿಷ್ಠ ವೇತನವೂ ನೀಡದೆ ಸದರಿ ನೌಕರರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ದೇವಾಲಯಗಳಿಗೆ ತಸ್ತಿಕ್ ಹಣ ಬಿಡುಗಡೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೧೯ (೧೧೫೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ದೇವಾಲಯಗಳಿಗೆ ತಸ್ತಿಕ್ ಯೋಜನೆಯಂತೆ ಈ ಹಿಂದಿನ ಸರ್ಕಾರ ವಾರ್ಷಿಕ ೨೪ ಸಾವಿರ ರೂ.ಗಳ ಅನುದಾನ ರೂಪಿಸಿತ್ತು. ಸದರಿ ಅನುದಾನವನ್ನು ೨೦೧೩-೧೪, ೨೦೧೪-

೧೫ನೇ ಸಾಲಿನಲ್ಲಿ ಎಷ್ಟು ಬಿಡುಗಡೆ ಮಾಡಲಾಗಿದೆ (ಜಿಲ್ಲಾವಾರು ವಿವರ ಒದಗಿಸುವುದು) ;

(ಆ) ತಸ್ತಿಕ್ ನೀಡುವ ದೇವಾಲಯಗಳಿಗೆ ತಸ್ತಿಕ್ ಹಣ ಪಡೆಯಲು ಇಲಾಖೆ ವಿನಾಕಾರಣ ಕಿರುಕುಳ ಕೊಟ್ಟು ಹಣ ಪಾವತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ತಸ್ತಿಕ್ ವಾರ್ಷಿಕ ೨೪ ಸಾವಿರ ರೂ.ಗಳನ್ನು ಸಮಾನ ಕಂತುಗಳಲ್ಲಿ ಕ್ಲುಪ್ತ ಸಮಯದಲ್ಲಿ ಪಾವತಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಯಡಿಯೂರು ಶ್ರೀ ಸಿದ್ದಲಿಂಗೇಶ್ವರ ಸ್ವಾಮಿ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೨೨೦ (೧೫೩೬) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಶ್ವವಿಖ್ಯಾತ ಶ್ರೀ ಯಡಿಯೂರು ಸಿದ್ದಲಿಂಗೇಶ್ವರ ಸ್ವಾಮಿ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯ ಯಾವಾಗ ಪ್ರಾರಂಭವಾಯಿತು ;

(ಆ) ಸರ್ಕಾರ ಈ ಜೀರ್ಣೋದ್ಧಾರಕ್ಕೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಈಗಾಗಲೇ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳಾವುವು ;

(ಇ) ಕಾಮಗಾರಿ ಮುಗಿಸಲು ಯಾವುದಾದರೂ ಅಡಚಣೆ ಇದೆಯೇ ; ಹಾಗಿದ್ದಲ್ಲಿ, ಸಮಸ್ಯೆಗಳನ್ನು ಬಗೆಹರಿಸಲಾಗಿದೆಯೇ ;

(ಈ) ದೇವಸ್ಥಾನದ ನಿರ್ವಹಣೆಯು ಯಾವ ರೀತಿ ನಡೆಯುತ್ತಿದೆ (ವಿವರ ನೀಡುವುದು) ;

(ಉ) ಬಾಕಿ ಉಳಿದಿರುವ ಕಾಮಗಾರಿಗಳನ್ನು ಮುಗಿಸಲು ಅಗತ್ಯವಿರುವ ಹಣ ಬಿಡುಗಡೆ ಮಾಡಿ ಲಕ್ಷಾಂತರ ಭಕ್ತಾಧಿಗಳಿಗೆ ಅನುಕೂಲ ಮಾಡಿಕೊಡಲು ಕ್ರಮ ಜರುಗಿಸಲಾಗುವುದೇ ?

## ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿರುವ ಕೆರೆಗಳ ಅಭಿವೃದ್ಧಿ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೨೨೧ (೧೫೩೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿರುವ ಕೆರೆಗಳೆಷ್ಟು ; ಇವುಗಳ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ ;

(ಆ) ಇತ್ತೀಚಿನ ದಿನಗಳಲ್ಲಿ ಕೆಲವು ಕೆರೆಗಳ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಒತ್ತುವರಿಯಾಗಿರುವ ಮತ್ತು ಪತ್ತೆ ಹಚ್ಚಿರುವ ಕೆರೆಗಳಾವುವು ;

(ಈ) ಒತ್ತುವರಿ ಮಾಡಿರುವವರ ಮೇಲೆ ತೆಗೆದುಕೊಂಡಿರುವ ಕ್ರಮಗಳೇನು ?

## ಬಿ.ಬಿ.ಎಂ.ಪಿ.ಯಲ್ಲಿ ಪ್ರತಿಮೆ ನಿರ್ಮಾಣದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೨೨೨ (೧೫೩೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಬಿ.ಎಂ.ಪಿ.ಗೆ ಸೇರಿದ ಜಾಗಗಳಲ್ಲಿ ಅನೇಕ ಹಿರಿಯರ ಪ್ರತಿಮೆ ಅನಾವರಣ ಮಾಡಲು ಹಲವಾರು ವರ್ಷಗಳಿಂದ ಬಂದಿರುವ ಬೇಡಿಕೆಗಳೆಷ್ಟು; ಅವು ಯಾವುವು ;

(ಆ) ಹಾಗಿದ್ದಲ್ಲಿ, ಈಗಾಗಲೇ ಎಷ್ಟು ಪ್ರತಿಮೆಗಳನ್ನು ಅನಾವರಣ ಮಾಡಲಾಗಿದೆ; ಅವು ಯಾವುವು ;

(ಇ) ಬಹಳ ವರ್ಷಗಳ ಹಿಂದೆಯೇ ನೇಕಾರ ಸಮಾಜದ ಬನಪ್ಪ ಕುಟುಂಬ ಬಿ.ಬಿ.ಎಂ.ಪಿ.ಗೆ ದಾನ ನೀಡಿರುವ ಜಾಗದಲ್ಲಿ ಶ್ರೀ ದೇವರ ದಾಸಿಮಯ್ಯ ಪ್ರತಿಮೆ ಅನಾವರಣ ಮಾಡಲು ಮುಖ್ಯಮಂತ್ರಿಗಳು ಆದೇಶ ಮಾಡಿದ್ದರೂ, ಇದುವರೆವಿಗೂ ಕ್ರಮ ತೆಗೆದುಕೊಳ್ಳದಿರಲು ಕಾರಣವೇನು ;

(ಈ) ಹಲವು ಪ್ರತಿಮೆಗಳಿಗೆ ಅವಕಾಶ ಮಾಡಿಕೊಟ್ಟು, ಶ್ರೀ ದೇವರ ದಾಸಿಮಯ್ಯ ಪ್ರತಿಮೆಗೆ ಅವಕಾಶ ನೀಡದಿರಲು ಕಾರಣವೇನು; ಈಗಲಾದರೂ ನೇಕಾರರ ಆಶಯ ಮತ್ತು ಬೇಡಿಕೆಗೆ ಸರ್ಕಾರ ಸ್ಪಂದಿಸುವುದೇ ?

## ಮುಜರಾಯಿ ದೇವಸ್ಥಾನಗಳ ಅರ್ಚಕರ ಕುಂದು ಕೊರತೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೨೨೩ (೧೫೩೫) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಮುಜರಾಯಿ ದೇವಸ್ಥಾನಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಪ್ರಮುಖವಾದ ಮತ್ತು ಪ್ರವಾಸಿಗರು ಸಂದರ್ಶಿಸುವಂತಹ ಪ್ರಸಿದ್ಧ ಸ್ಥಳವೆಂದು ಗುರುತಿಸಿರುವ ದೇವಸ್ಥಾನಗಳು ಯಾವುವು ; ಅವು ಎಲ್ಲಿವೆ (ವಿವರ ನೀಡುವುದು) ;

(ಇ) ಮುಜರಾಯಿ ದೇವಸ್ಥಾನಗಳಲ್ಲಿ ಪೂಜೆ ಸಲ್ಲಿಸುವ ಅರ್ಚಕರು ಕಳೆದ ಹಲವಾರು ವರ್ಷಗಳಿಂದ ಕೆಲವೊಂದು ಬೇಡಿಕೆಗಳನ್ನು ಸರ್ಕಾರಕ್ಕೆ ಸಲ್ಲಿಸಿದ್ದಾರೆಯೇ ; ಆ ಪ್ರಮುಕ ಬೇಡಿಕೆಗಳೇನು ; ಈಡೇರಿಸುವ ಬೇಡಿಕೆಗಳಾವುವು ;

(ಈ) ಉಳಿದ ಬೇಡಿಕೆಗಳ ಕುರಿತು ಅರ್ಚಕರು ಹಾಗೂ ಆಗಮಿಕರ ರಾಜ್ಯ ಸಂಘದ ಪದಾಧಿಕಾರಿಗಳೊಂದಿಗೆ ಸರ್ಕಾರ ಚರ್ಚಿಸಿದೆಯೇ;

(ಉ) ಹಾಗಿದ್ದಲ್ಲಿ, ಅವರ ಬೇಡಿಕೆಗಳನ್ನು ಈಡೇರಿಸಲು ಕ್ರಮ ಕೈಗೊಳ್ಳಲಾಗುವುದೇ ?

## ನಗರಾಭಿವೃದ್ಧಿ ಪ್ರಾಧಿಕಾರಗಳಿಂದ ಹಂಚಿಕೆಯಾದ ನಿವೇಶನಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೨೪ (೧೪೭೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಮಹಾನಗರ ಪಾಲಿಕೆಯು ಕಳೆದ ೨ ವರ್ಷಗಳಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಿದೆ ; (ಮಾಹಿತಿ ನೀಡುವುದು)

(ಆ) ಇಲ್ಲಿಯವರೆಗೆ ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಎಷ್ಟು ಅರ್ಜಿಗಳು ಸಲ್ಲಿಕೆಯಾಗಿದೆ ;

(ಇ) ನಿವೇಶನ ಪಡೆಯಲು ನಿಗದಿಪಡಿಸಿರುವ ಹಣವೆಷ್ಟು ;

(ಈ) ನಿವೇಶನ ಹಂಚಿಕೆಯಲ್ಲಿ ಅನುಸರಿಸಲಾಗುವ ಮಾನದಂಡಗಳೇನು (ಮಾಹಿತಿ ನೀಡುವುದು) ?

## ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳು

**ಶ್ರೀ ಭಾನುಪ್ರಕಾಶ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೨೨೫ (೧೫೧೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ನಗರಾಭಿವೃದ್ಧಿ ಪ್ರಾಧಿಕಾರಗಳ ಸಂಖ್ಯೆ ಎಷ್ಟು (ವಿವರಗಳೊಂದಿಗೆ) ;

(ಆ) ಸದರಿ ಪ್ರಾಧಿಕಾರಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿದೆಯೇ ; ಬಡ್ತಿಗಳನ್ನು ನೀಡಲು ಅನುಸರಿಸುತ್ತಿರುವ ಪದ್ಧತಿಗಳೇನು (ವಿವರಗಳೊಂದಿಗೆ) ;

(ಇ) ಸದರಿ ಪ್ರಾಧಿಕಾರಗಳಿಗೆ ಸೇವಾ ನಿಯಮಗಳನ್ನು ರಚಿಸಲಾಗಿದೆಯೇ ;

(ಈ) ಸದರಿ ಪ್ರಾಧಿಕಾರಗಳಿಂದ ನಿವೃತ್ತರಾದವರ ಸಂಖ್ಯೆ ಎಷ್ಟು ; ಪಿಂಚಣಿ ಸೌಲಭ್ಯ ವಿಸ್ತರಿಸಲಾಗಿದೆಯೇ ; ಪಿಂಚಣಿ ಸೌಲಭ್ಯ ಪಡೆದವರ ಸಂಖ್ಯೆ ಎಷ್ಟು ; ವಿಸ್ತರಿಸದಿದ್ದಲ್ಲಿ, ಕಳೆದ ಮೂರು ವರ್ಷಗಳ ವಿವರಣೆ ನೀಡುವುದು ;

(ಉ) ಸಂವಿಧಾನದ ೭೪ನೇ ತಿದ್ದುಪಡಿಯನ್ನು ರಾಜ್ಯದಲ್ಲಿ ಜಾರಿಗೊಳಿಸಲಾಗುವುದೇ ;

(ಊ) ಸದರಿ ಪ್ರಾಧಿಕಾರಗಳನ್ನು ಮುಂದುವರೆಸಲಾಗುವುದೇ ?

## ಎಲ್ಲಾ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೨೬ (೧೫೧೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಲ್ಲಿರುವ ಇಲಾಖೆಗಳ ಒಟ್ಟು ಸಂಖ್ಯೆ ಎಷ್ಟು ; ಅವು ಯಾವುವು (ವಿವರಗಳೊಡನೆ) ;

(ಆ) ಸದರಿ ಇಲಾಖೆಗಳಲ್ಲಿ ಇದುವರೆವಿಗೂ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು ಮಾಹಿತಿ ನೀಡುವುದು) ;

(ಇ) ಸದರಿ ಇಲಾಖೆಗಳಲ್ಲಿ ಇದುವರೆವಿಗೂ ನಿವೃತ್ತಿ, ರಾಜೀನಾಮೆ ಹಾಗೂ ಇನ್ನಿತರೆ ಕಾರಣಗಳಿಂದ ತೆರವಾಗಿರುವ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; ಎಂದಿನಿಂದ ಖಾಲಿ ಇವೆ (ಇಲಾಖಾವಾರು ಮಾಹಿತಿ ನೀಡುವುದು) ;

(ಈ) ಸದರಿ ಇಲಾಖೆಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಇಲಾಖಾವಾರು ಮಾಹಿತಿ ನೀಡುವುದು) ?

## ಬೆಂಗಳೂರಿನ ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದ ಮನೆಗಳ ಬಗ್ಗೆ

**ಶ್ರೀ ಅಶ್ವಥ ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೨೨೭ (೧೫೨೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

೨೦೧೨ ರಿಂದ ಇಲ್ಲಿಯವರೆಗೆ ಬೆಂಗಳೂರಿನ ಗೋವಿಂದರಾಜ ನಗರ ವಿಧಾನಸಭಾ ಕ್ಷೇತ್ರ ಹಾಗೂ ವಿಜಯನಗರ ವಿಧಾನಸಭಾ ಕ್ಷೇತ್ರಗಳಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಎಷ್ಟು ಮನೆಗಳನ್ನು ನೀಡಲಾಗಿದೆ ; ಯಾವ ಯೋಜನೆಯಡಿ ನೀಡಲಾಗಿದೆ ; ಒಂದು ಮನೆಯನ್ನು ನಿರ್ಮಿಸಲು ಎಷ್ಟು ಹಣವನ್ನು ನೀಡಲಾಗುತ್ತಿದೆ (ಮನೆಯನ್ನು ನಿರ್ಮಿಸಿಕೊಳ್ಳಲು ಸಹಾಯಧನವನ್ನು ಪಡೆದ ಫಲಾನುಭವಿಗಳ ಹೆಸರು ಮತ್ತು ವಿಳಾಸವನ್ನು ನೀಡುವುದು) ?

## ಪಶುವೈದ್ಯ ಕಾಲೇಜುಗಳು

**ಶ್ರೀ ಅಶ್ವತ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೨೨೮ (೧೪೯೫) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಮತ್ತು ಹಾಸನ ಪಶುವೈದ್ಯ ಕಾಲೇಜುಗಳು ಸರ್ಕಾರದ ಹಾಗೂ ವಿಶ್ವವಿದ್ಯಾಲಯದ ನಿರಾಸಕ್ತಿ ಹಾಗೂ ನಿರ್ಲಕ್ಷ್ಯ ಧೋರಣೆಯಿಂದ ಮುಚ್ಚುವ ಹಂತ ತಲುಪಿದೆಯೇ ;

(ಆ) ಕಳೆದ ಸಾಲಿನಿಂದ ಈವರೆವಿಗೂ ರಾಜ್ಯದಲ್ಲಿ ಕಾಲುಬಾಯಿ ಜ್ವರ ಕಾಯಿಲೆಯಿಂದ ಎಷ್ಟು ಜಾನುವಾರುಗಳು ಸಾವಿಗೀಡಾಗಿವೆ ; ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಈ ಕಾಯಿಲೆಗಾಗಿ ಎಷ್ಟು ಹಣ ಬಿಡುಗಡೆಗೊಳಿಸಲಾಗಿತ್ತು (ಜಿಲ್ಲಾವಾರು ವಿವರ ನೀಡುವುದು) ;

(ಇ) ಲಸಿಕೆ ಸಂಸ್ಥೆ ಆರೋಗ್ಯ ಮತ್ತು ಜೈವಿಕ ಸಂಸ್ಥೆಯಿಂದ ಕಳೆದ ವರ್ಷದಿಂದ ಈವರೆವಿಗೂ ಎಷ್ಟು ಬಗೆಯ ಲಸಿಕೆಗಳನ್ನು ಎಷ್ಟು ಪ್ರಮಾಣದಲ್ಲಿ ಖರೀದಿಸಿದೆ ; ಇದಕ್ಕಾಗಿ ಆ ಸಂಸ್ಥೆಗೆ ಎಷ್ಟು ಹಣ ನೀಡಲಾಗಿದೆ ;

(ಈ) ಪಶುವೈದ್ಯಕೀಯ ವಿಶ್ವವಿದ್ಯಾಲಯದ ಕುಲಪತಿಗಳ ಮೇಲೆ ರಾಜ್ಯದ ಲೋಕಾಯುಕ್ತ ಅಧಿಕಾರಿಗಳು ತನಿಖೆ ಆರಂಭಿಸಿರುವ ವಿಷಯ ಸರ್ಕಾರಕ್ಕೆ ತಿಳಿದಿದೆಯೇ ; ಲೋಕಾಯುಕ್ತರ ಶಿಫಾರಸ್ಸು ಏನು ; ಅದಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

(ಉ) ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಗೆ ೨೦೧೩-೧೪ ಮತ್ತು ೨೦೧೪-೧೫ರ ಸಾಲಿನಲ್ಲಿ ತಯಾರಿಸಿರುವ ಲಸಿಕೆಗಳು ಯಾವುವು ಮತ್ತು ಪ್ರಮಾಣ ಎಷ್ಟು ; ಮಾರಾಟ ಮಾಡಿರುವುದರಿಂದ ಗಳಿಸಿದ ಆದಾಯ ಎಷ್ಟು ;

(ಊ) ಪಶು ಸಂಗೋಪನಾ ಇಲಾಖೆ ಲಸಿಕೆಗಳನ್ನು ಪಡೆದಿದೆಯೇ (ಲಸಿಕೆಗಳನ್ನು ವಿತರಿಸಿರುವ ವಿವರ ನೀಡುವುದು) ?

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. 03382/1000 ಪ್ರತಿಗಳು/15-07-2014